₹ 4 | ಪುಟ: 4 | ಸಂಪುಟ: 4 | ಸಂಚಿಕೆ 96 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Volume : 4 | Issue: 96 | Tuesday, 30, MAY, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ಸಚಿವರು ಮತ್ತು ಖಾತೆಗಳ ವಿವರ

1. ಸಿದ್ದರಾಮಯ್ಯ (ಮುಖ್ಯಮಂತ್ರಿ)– ಹಣಕಾಸು, ಆಡಳಿತ ಸುಧಾರಣೆ, ಗುಪ್ತಚರ, ವಾರ್ತಾ ಇಲಾಖೆ ಮತ್ತು ಹಂಚಿಕೆಯಾಗದೆ ಉಳಿರುವ ಖಾತೆಗಳು
2. ಡಿ.ಕೆ. ಶಿವಕುಮಾರ್ (ಉಪ ಮುಖ್ಯಮಂತ್ರಿ)– ಜಲಸಂಪನ್ಮೂಲ, ಬೆಂಗಳೂರು ನಗರ ಅಭಿವೃದ್ಧಿ
3. ಜಿ. ಪರಮೇಶ್ವರ– ಗೃಹ (ಗುಪ್ತಚರ ಹೊರತುಪಡಿಸಿ)
4. ಎಚ್.ಕೆ. ಪಾಟೀಲ್– ಕಾನೂನು ಮತ್ತು ಸಂಸದೀಯ ವ್ಯವಹಾರ, ಪ್ರವಾಸೋದ್ಯಮ
5. ಕೆ.ಎಚ್. ಮುನಿಯಪ್ಪ– ಆಹಾರ ಮತ್ತು ನಾಗರಿಕ ಪೂರೈಕೆ, ಗ್ರಾಹಕ ವ್ಯವಹಾರ
6. ಕೆ.ಜೆ. ಜಾರ್ಜ್– ಇಂಧನ
7. ಎಂ.ಬಿ ಪಾಟೀಲ್– ಬೃಹತ್ ಮತ್ತು ಮಧ್ಯಮ ಕೈಗಾರಿಕೆ,
8. ರಾಮಲಿಂಗಾರೆಡ್ಡಿ– ಸಾರಿಗೆ, ಮುಜರಾಯಿ
9. ಸತೀಶ್ ಜಾರಕಿಹೊಳಿ– ಲೋಕೋಪಯೋಗಿ
10. ಪ್ರಿಯಾಂಕ್ ಖರ್ಗೆ– ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್
11. ಜಮೀರ್ ಅಹ್ಮದ್ ಖಾನ್– ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತ
12. ಕೃಷ್ಣ ಬೈರೇಗೌಡ– ಕಂದಾಯ (ಮುಜರಾಯಿ ಹೊರತುಪಡಿಸಿ)
13. ದಿನೇಶ್ ಗುಂಡೂರಾವ್– ಆರೋಗ್ಯ ಮತ್ತು ಕುಟುಂಬ ಕಲ್ಯಾಣ
14. ಎನ್. ಚಲುವರಾಯಸ್ವಾಮಿ– ಕೃಷಿ
15. ಕೆ. ವೆಂಕಟೇಶ್– ಪಶು ಸಂಗೋಪನೆ ಮತ್ತು ರೇಷ್ಮೆ
16. ಡಾ. ಎಚ್.ಸಿ. ಮಹದೇವಪ್ಪ– ಸಮಾಜ ಕಲ್ಯಾಣ
17. ಈಶ್ವರ್ ಖಂಡ್ರೆ– ಅರಣ್ಯ, ಜೈವಿಕ ಮತ್ತು ಪರಿಸರ
18. ಕೆ.ಎನ್. ರಾಜಣ್ಣ– ಸಹಕಾರ
19. ಶರಣಬಸಪ್ಪ ದರ್ಶನಾಪುರ್– ಸಣ್ಣ ಕೈಗಾರಿಕೆ, ಸಾರ್ವಜನಿಕ ಸ್ವಾಮ್ಯದ ಕೈಗಾರಿಕೆ
20. ಶಿವಾನಂದ ಪಾಟೀಲ್– ಜವಳಿ, ಸಕ್ಕರೆ, ಕೃಷಿ ಮಾರುಕಟ್ಟೆ
21. ಆರ್.ಬಿ. ತಿಮ್ಮಾಪುರ– ಅಬಕಾರಿ
22. ಎಸ್.ಎಸ್.ಮಲ್ಲಿಕಾರ್ಜುನ್–ಗಣಿ, ಭೂವಿಜ್ಞಾನ ಮತ್ತು ತೋಟಗಾರಿಕೆ
23. ಶಿವರಾಜ ಎಸ್ ತಂಗಡಗಿ– ಹಿಂದುಳಿದ ವರ್ಗ ಮತ್ತು ಕನ್ನಡ ಮತ್ತು ಸಂಸ್ಕತಿ
24. ಶರಣ್ ಪ್ರಕಾಶ್ ಪಾಟೀಲ್– ವೈದ್ಯಕೀಯ ಶಿಕ್ಷಣ, ಕೌಶಲ ಅಭಿವೃದ್ಧಿ
25. ಮಂಕಾಳ ವೈದ್ಯ– ಮೀನುಗಾರಿಕೆ, ಬಂದರು ಮತ್ತು ಒಳ ಸಾರಿಗೆ
26. ಲಕ್ಷ್ಮೀ ಹೆಬ್ಬಾಳಕರ– ಮಹಿಳಾ ಮತ್ತು ಮಕ್ಕಳ ಕಲ್ಯಾಣ, ವಿಕಲಚೇತನ, ಹಿರಿಯರ ಕಲ್ಯಾಣ
27. ರಹೀಂ ಖಾನ್– ಪೌರಾಡಳಿತ, ಹಜ್
28. ಡಿ. ಸುಧಾಕರ್– ಸಾಂಖ್ಯಿಕ ಮತ್ತು ಯೋಜನೆ
29. ಸಂತೋಷ್ ಲಾಡ್– ಕಾರ್ಮಿಕ
30. ಎನ್.ಎಸ್. ಬೋಸರಾಜು– ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ
31. ಬೈರತಿ ಸುರೇಶ್– ನಗರಾಭಿವೃದ್ಧಿ ಮತ್ತು ನಗರ ಯೋಜನೆ (ಬೆಂಗಳೂರು ಅಭಿವೃದ್ಧಿ, ಬಿಬಿಎಂಪಿ, ಬಿಡಿಎ, ಬಿಡಬ್ಲ್ಯೂಎಸ್–ಎಸ್‌ಬಿ, ಬಿಎಂಆರ್ಡಿಎ, ಬಿಎಂಆರ್‌ಸಿಎಲ್ ಹೊರತುಪಡಿಸಿ)
32. ಮಧು ಬಂಗಾರಪ್ಪ– ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
33. ಡಾ ಎಂ.ಸಿ. ಸುಧಾಕರ್– ಉನ್ನತ ಶಿಕ್ಷಣ
34. ಬಿ. ನಾಗೇಂದ್ರ– ಯುವಜನ ಸೇವೆ, ಕ್ರೀಡೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ.

## ಫೋಟೋ, ವಿಡಿಯೋ ಸಮೇತ ಕಾಮಗಾರಿ ವಿವರ ನೀಡಿ: ಬಿಬಿಎಂಪಿ ಅಧಿಕಾರಿಗಳಿಗೆ ಡಿಸಿಎಂ ಖಡಕ್ ಸೂಚನೆ



ಬೆಂಗಳೂರು: ಬಿಬಿಎಂಪಿ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಆಗಿರುವ ಕೆಲಸ, ವೆಚ್ಚದ ಬಗ್ಗೆ ಫೋಟೋ, ವಿಡಿಯೋ ಮತ್ತಿತರ ದಾಖಲೆಗಳನ್ನು ಒದಗಿಸಬೇಕು ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ.

ಬಿಬಿಎಂಪಿ ಉನ್ನತ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಸಲಹೆ, ಸೂಚನೆಗಳನ್ನು ನೀಡಿದ ಉಪ ಮುಖ್ಯಮಂತ್ರಿ, ಬಿಬಿಎಂಪಿ ಅನುದಾನ ಪಡೆದು ಶುರು ಮಾಡದ ಕೆಲಸ, ಕಾಮಗಾರಿಗಳನ್ನು ಯತಾಸ್ಥಿತಿಯಲ್ಲಿ ತಡೆ ಹಿಡಿಯಬೇಕು. ಕಾಲಮಿತಿಯೊಳಗೆ ಪೂರ್ಣಗೊಳಿಸದ ಯೋಜನೆ ಕೆಲಸಗಳನ್ನು ತಡೆ ಹಿಡಿಯಬೇಕು. ಕೆಲಸ ಆಗದಿದ್ದರೂ ಬಿಲ್, ಒಂದೇ ಕಾಮಗಾರಿಗೆ ಎರಡೆರಡು ಬಿಲ್, ಒಂದೇ ಕಾಮಗಾರಿಗೆ ಎರಡು ಕಂಪನಿಗಳಿಂದ ಬಿಲ್ ಆಗಿರುವ ಬಗ್ಗೆ ತನಿಖೆ ಮಾಡಿ 10 ದಿನದೊಳಗೆ ಪಟ್ಟಿ ನೀಡಬೇಕು ಎಂದರು.

ರಸ್ತೆ ಮತ್ತಿತರ ಕಾಮಗಾರಿಗಳನ್ನು ಏಜೆನ್ಸಿಗಳ ಮೂಲಕವೇ ಮಾಡುವುದಾದರೆ ಪಾಲಿಕೆಯಲ್ಲಿ ಎಂಜಿನಿಯರ್ ಗಳು ಇರುವುದರ ಔಚಿತ್ಯವಾದರೂ ಏನು? ಎಂದು ಪ್ರಶ್ನಿಸಿದ ಡಿಕೆ ಶಿವಕುಮಾರ್, ಕೆಲಸ ಆಗಿರುವ ಜಾಗಗಳಿಗೆ ಖುದ್ದು ಹೋಗಿ ಪರಿಶೀಲನೆ ಮಾಡೋಣ. ಬೆಂಗಳೂರಿಗೆ ಸಂಪರ್ಕ ಕಲ್ಪಿಸುವ ಹೊರವಲಯದ ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಘನ ತ್ಯಾಜ್ಯ ವಿಲೇವಾರಿಗೆ ಅವಕಾಶ ಕಲ್ಪಿಸಬಾರದು. ಹಾಗೇ ತ್ಯಾಜ್ಯ ವಿಲೇವಾರಿ ಮಾಡುವವರ ವಿರುದ್ಧ ದಂಡ ಮತ್ತಿತರ ಕಾನೂನು ಕ್ರಮ ಜರುಗಿಸಬೇಕು. ಒಣ ಮತ್ತು ಹಸಿಕಸ ವೈಜ್ಞಾನಿಕ ವಿಲೇವಾರಿಗೆ ಸಮರ್ಪಕ ವ್ಯವಸ್ಥೆ ಕಲ್ಪಿಸಬೇಕು ಎಂದು ಸಲಹೆ ನೀಡಿದರು.

ಸ್ವಚ್ಛತೆ, ನೈರ್ಮಲ್ಯ, ಆರೋಗ್ಯ ರಕ್ಷಣೆಗೆ ಆದ್ಯತೆ ನೀಡಬೇಕು. ಅಕ್ರಮಗಳಿಗೆ ಆಸ್ಪದ ಇಲ್ಲದಂತೆ ಟಿ ಡಿ ಆರ್ ಯೋಜನೆ ಜಾರಿಗೆ ತರಬೇಕು. ರಸ್ತೆ ಮತ್ತಿತರ ಯೋಜನೆಗಳಿಗೆ ಆಸ್ತಿ ಕಳೆದುಕೊಂಡವರ ಹಿತ ಕಾಯಬೇಕು.

ಯಾವುದೇ ಯೋಜನೆ ಕಾಮಗಾರಿ ಆರಂಭಕ್ಕೆ ಮುನ್ನ ಆ ಜಾಗದ ವಿಡಿಯೋ, ಫೋಟೋ ಮಾಡಬೇಕು. ನಿಜವಾಗಿಯೂ ಜನರ ಉಪಯೋಗಕ್ಕೆ ಆ ಯೋಜನೆ ಉಪಯೋಗವಾಗಿದೆಯೇ ಎಂಬ ಮಾಹಿತಿ ಸಾರ್ವಜನಿಕರಿಗೆ ಸಿಗಲಿ ಎಂದರು.

## ಬಿಜೆಪಿ ಆಡಳಿತವಿರುವ ರಾಜ್ಯಗಳ ಸಿಎಂ, ಡಿಸಿಎಂ ಗಳೊಂದಿಗೆ ಪ್ರಧಾನಿ ಮೋದಿ ಸಭೆ




ಹೊಸದಿಲ್ಲಿ: ಬಿಜೆಪಿ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳ ಜೊತೆ ಪ್ರಧಾನಿ ನರೇಂದ್ರ ಮೋದಿ ಅವರು ಸಭೆ ನಡೆಸಿ ಹಲವು ಸಲಹೆ ಸೂಚನೆಗಳನ್ನು ನೀಡಿದರು.

"ಈ ಸಭೆಯಲ್ಲಿ ಅಭಿವೃದ್ಧಿಯನ್ನು ಇನ್ನಷ್ಟು ತೀವ್ರಗೊಳಿಸುವ ನಿಟ್ಟಿನಲ್ಲಿ ಚರ್ಚಿಸಲಾಗಿದೆ" ಎಂದು ಮಾಹಿತಿ ನೀಡಿರುವ ನರೇಂದ್ರ ಮೋದಿ, "ಸಭೆ ಬಿಜೆಪಿಯ ಉತ್ತಮ ಆಡಳಿತದ ಕಾರ್ಯಸೂಚಿಯ ಭಾಗವಾಗಿದೆ.

ಇದರಲ್ಲಿ ಮುಖ್ಯಮಂತ್ರಿಗಳು ಆಡಳಿತದ ವಿಧಾನ ಮತ್ತು ಹಲವಾರು ಜನಪರ ಯೋಜನೆಗಳ ಅನುಷ್ಠಾನಗಳ ಬಗ್ಗೆ ವಿವರಿಸಿದ್ದಾರೆ. ಮುಂಬರುವ ದಿನಗಳಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಬಗ್ಗೆಯೂ ಚರ್ಚಿಸಲಾಗಿದೆ" ಎಂದು ತಿಳಿಸಿದ್ದಾರೆ. ಸಭೆಯಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ, ಮುಖ್ಯಮಂತ್ರಿಗಳಾದ ಉತ್ತರ ಪ್ರದೇಶದ ಸಿಎಂ ಯೋಗಿ ಆದಿತ್ಯನಾಥ್, ಹರಿಯಾಣಾದ ಮನೋಹರ್ ಲಾಲ್ ಖಟ್ಟರ್, ಅಸ್ಸಾಂನ ಹಿಮಂತ ಬಿಸ್ವಾ ಶರ್ಮಾ, ಮಧ್ಯಪ್ರದೇಶದ ಶಿವರಾಜ್ ಸಿಂಗ್ ಚೌಹಾಣ್, ಉತ್ತರಾಖಂಡದ ಪುಷ್ಕರ್ ಸಿಂಗ್ ಧಾಮಿ, ತ್ರಿಪುರಾದ ಮಾಣಿಕ್ ಸಹಾ ಹಾಗೂ ಅರುಣಾಚಲಪ್ರದೇಶದ ಪೆಮಾ ಖಂಡು, ಮಹಾರಾಷ್ಟ್ರ ಉಪ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಯುಪಿ ಉಪಮುಖ್ಯಮಂತ್ರಿ ಕೇಶವ್ ಪ್ರಸಾದ್ ಮೌರ್ಯ ಹಾಗೂ ಬ್ರಜೇಶ್ ಪಾಠಕ್ ಮತ್ತಿತರರಿದ್ದರು.

## ಮಣಿಪುರದಲ್ಲಿ ಮತ್ತೆ ಭುಗಿಲೆದ್ದ ಹಿಂಸಾಚಾರ; 8 ತಾಸುಗಳಲ್ಲಿ 40 ಭಯೋತ್ಪಾದಕರ ಹತ್ಯೆ



ಇಂಫಾಲ: ಮಣಿಪುರ ರಾಜ್ಯದಲ್ಲಿ ಜನಾಂಗೀಯ ಹಿಂಸಾಚಾರ ಮತ್ತೆ ಭುಗಿಲೆದ್ದಿದೆ. ರಾಜ್ಯದ ನಾನಾ ಭಾಗಗಳಲ್ಲಿ 8 ತಾಸುಗಳ ಕಾಲ ನಡೆಸಿದ ಕಾರ್ಯಾಚರಣೆಯಲ್ಲಿ 40 ಭಯೋತ್ಪಾದಕರನ್ನು ಹತ್ಯೆ ಮಾಡಲಾಗಿದೆ.

ಈ ವಿಷಯವನ್ನು ಮಣಿಪುರ ಮುಖ್ಯಮಂತ್ರಿ ಬೀರೇನ್ ಸಿಂಗ್ ಅವರು ಈ ವಿಷಯವನ್ನು ದೃಢಪಡಿಸಿದ್ದಾರೆ. ರಾಜ್ಯದಲ್ಲಿ ಭಾನುವಾರ ನಡೆದಿದ್ದ ಗಲಭೆಯಲ್ಲಿ ಇಬ್ಬರು ಮೃತಪಟ್ಟು 12 ಜನ ಗಾಯಗೊಂಡಿದ್ದರು.

ಒಂದು ತಿಂಗಳಿಂದ ನಡೆಯುತ್ತಿರುವ ಈ ಜನಾಂಗೀಯ ಹಿಂಸಾಚಾರದಲ್ಲಿ 70ಕ್ಕೂ ಹೆಚ್ಚು ಜನ ಮೃತಪಟ್ಟಿದ್ದಾರೆ. ರಾಜ್ಯಾದ್ಯಂತ ಇಂಟರ್ ನೆಟ್ ಸಂಪರ್ಕ ಕಡಿತಗೊಳಿಸಲಾಗಿದ್ದು ಹಿಂಸಾಚಾರ ತಾರಕಕ್ಕೇರಿದ ಸ್ಥಳಗಳಲ್ಲಿ ಕರ್ಫ್ಯೂ ಜಾರಿಗೊಳಿಸಲಾಗಿದೆ.

## ಕೊಟ್ಟ ಮಾತಿನಂತೆ ಗ್ಯಾರಂಟಿ ಯೋಜನೆಗಳ ಜಾರಿ: ಡಿಸಿಎಂ ಡಿ.ಕೆ. ಶಿವಕುಮಾರ




ಬೆಂಗಳೂರು: "ನಾವು ಕೊಟ್ಟ ಮಾತಿನಂತೆ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುತ್ತೇವೆ ಎಂದು ರಾಜ್ಯದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹೇಳಿದ್ದಾರೆ.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, "ಮುಖ್ಯಮಂತ್ರಿಗಳು ಹಣಕಾಸು ಸಚಿವಾಲಯ ಜವಾಬ್ದಾರಿ ಹೊತ್ತಿದ್ದಾರೆ. ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದಾರೆ" ಎಂದು ತಿಳಿಸಿದರು.

ಜೂನ್ 1ರಂದು ಸಚಿವ ಸಂಪುಟ ಸಭೆ ಕರೆಯಲಾಗಿದ್ದು, ಗ್ಯಾರಂಟಿ ಯೋಜನೆಗಳ ಬಗ್ಗೆ ಚರ್ಚೆ ಮಾಡುತ್ತೇವೆ. ನಮ್ಮದು ಜವಾಬ್ದಾರಿಯುತ ಸರಕಾರ. ನಾವು ಈ ಯೋಜನೆಯನ್ನು ಕ್ರಮಬದ್ಧವಾಗಿ ಜಾರಿ ಮಾಡುತ್ತೇವೆ" ಎಂದರು.

"ಯುವಕರು, ಮಹಿಳೆಯರಿಗೆ ಕೊಟ್ಟಿರುವ ಮಾತು ಉಳಿಸಿಕೊಳ್ಳುತ್ತೇವೆ. ಎಲ್ಲ ಇಲಾಖೆಗಳ ಅಧಿಕಾರಿಗಳ ಜೊತೆ ಸಭೆ ಮಾಡುತ್ತಿದ್ದು, ನಾನು ಕೂಡ ನನ್ನ ಸಚಿವಾಲಯಗಳ ಅಧಿಕಾರಿಗಳ ಸಭೆ ಮಾಡುತ್ತಿದ್ದೇನೆ" ಎಂದು ಅವರು ತಿಳಿಸಿದರು.



## ಮಾಜಿ ಮುಖ್ಯಮಂತ್ರಿ ಬೊಮ್ಮಾಯಿಯವರು ಕೇಂದ್ರದ ಸಂಸ್ಕೃತಿ ಮಂತ್ರಿ ಭೇಟಿ

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಸೋಮವಾರ ಕೇಂದ್ರದ ಸಂಸ್ಕೃತಿ ಮಂತ್ರಿ ಮೀನಾಕ್ಷಿ ಲೇಖಿಅವರನ್ನು ಬಿಜೆಪಿ ಕಚೇರಿಯಲ್ಲಿ ಭೇಟಿ ಮಾಡಿ ಉಭಯ ಕುಶಲೋಪರಿ ಚರ್ಚಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಹಾಗೂ ವಿಧಾನ ಪರಿಷತ್ ಸದಸ್ಯ ಎನ್ ರವಿಕುಮಾರ್ ಹಾಜರಿದ್ದರು.

## ಮೈಸೂರು: ಖಾಸಗಿ ಬಸ್– ಕಾರು ಮುಖಾಮುಖಿ ಡಿಕ್ಕಿ ಭೀಕರ ಅಪಘಾತದಲ್ಲಿ 10 ಮಂದಿ ಸಾವು



ಮೈಸೂರು: ಮೈಸೂರು ಜಿಲ್ಲೆಯ ಕುರುಬೂರು ಗ್ರಾಮದ ಪಿಂಜರ ಪೋಲ್ ಬಳಿ ಸೋಮವಾರ ಖಾಸಗಿ ಬಸ್ ಮತ್ತು ಕಾರು ಮುಖಾಮುಖಿ ಡಿಕ್ಕಿಯಾಗಿದ್ದು, ಭೀಕರ ಅಪಘಾತದಲ್ಲಿ 10 ಮಂದಿ ಮೃತಪಟ್ಟಿದ್ದಾರೆ.

ಇಂದು ಮಧ್ಯಾಹ್ನ ಕೊಳ್ಳೇಗಾಲ – ಟಿ.ನರಸೀಪುರ ಮುಖ್ಯ ರಸ್ತೆಯಲ್ಲಿ ಈ ಅಪಘಾತ ಸಂಭವಿಸಿದ್ದು, ಕಾರಿನಲ್ಲಿದ್ದ 10 ಮಂದಿ ಮೃತಪಟ್ಟಿದ್ದಾರೆ ಮತ್ತು ಹಲವರು ಗಾಯಗೊಂಡಿದ್ದಾರೆ.

ಅಪಘಾತದ ತೀವ್ರತೆಗೆ ಇನ್ನೊವಾ ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ. ಕಾರಿನಲ್ಲಿ ಸಿಲುಕಿರುವ ವ್ಯಕ್ತಿಗಳನ್ನು ಸ್ಥಳೀಯರು ರಕ್ಷಣೆ ಮಾಡಿದ್ದು, ಮಗು ಸೇರಿದಂತೆ ಹಲವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆ ಎನ್ನಲಾಗಿದೆ.

ಅಪಘಾತದಲ್ಲಿ ನಾಲ್ವರು ಪುರುಷರು, ಮೂವರು ಮಹಿಳೆಯರು ಮತ್ತು ಮೂವರು ಮಕ್ಕಳು ಮೃತಪಟ್ಟಿದ್ದು, ಈ ಪೈಕಿ ಕೆಲವರು ಬಳ್ಳಾರಿ ಜಿಲ್ಲೆಯ ಸಂಗನಕಲ್ ನಿವಾಸಿಗಳಾಗಿದ್ದು, ಮೈಸೂರಿಗೆ ಪ್ರವಾಸಕ್ಕೆ ತೆರಳಿದ್ದರು. ಅಲ್ಲಿಂದ ಚಾಮರಾಜನಗರಕ್ಕೆ ಹೋಗಿದ್ದರು ಎನ್ನಲಾಗಿದೆ.

ಕಾರಿನಲ್ಲಿದ್ದ ಮೂವರ ಸ್ಥಿತಿ ಗಂಭೀರವಾಗಿದೆ. ಮೂವರು ಗಾಯಾಳುಗಳನ್ನು ಬಳ್ಳಾರಿ ಮೂಲದ ಜನಾರ್ದನ್ (45), ಪುನೀತ್ (4), ಶಶಿಕುಮಾರ್(24) ಎಂದು ಗುರುತಿಸಲಾಗಿದ್ದು, ಚಾಮರಾಜನಗರ ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಈ ಪೈಕಿ ಇಬ್ಬರ ಸ್ಥಿತಿ ಚಿಂತಾಜನಕವಾಗಿದೆ.

### ಮೃತರ ಕುಟುಂಬಕ್ಕೆ ತಲಾ 2 ಲಕ್ಷ ರೂ. ಪರಿಹಾರ ಘೋಷಿಸಿದ ಸಿಎಂ



ಮೈಸೂರು: ಮೈಸೂರು ಜಿಲ್ಲೆಯ ಕುರುಬೂರು ಗ್ರಾಮದ ಪಿಂಜರ ಪೋಲ್ ಬಳಿ ಸೋಮವಾರ ಖಾಸಗಿ ಬಸ್ ಮತ್ತು ಕಾರು ಮುಖಾಮುಖಿ ಡಿಕ್ಕಿಯಾಗಿದ್ದು, ಭೀಕರ ಅಪಘಾತದಲ್ಲಿ 10 ಮಂದಿ ಮೃತಪಟ್ಟಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೃತರ ಕುಟುಂಬಕ್ಕೆ ತಲಾ 2 ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

## ಗ್ಯಾರಂಟಿ ಅನುಷ್ಠಾನದಲ್ಲಿ ಕಾಂಗ್ರೆಸ್ ನಿಂದ ಜನತೆಗೆ ದೋಖಾ: ಬಸವರಾಜ ಬೊಮ್ಮಾಯಿ

ಬೆಂಗಳೂರು: ಚುನಾವಣೆ ಸಂದರ್ಭದಲ್ಲಿ ಜನತೆಗೆ ನೀಡಿದ್ದ ಐದು ಗ್ಯಾರಂಟಿಗಳ ಜಾರಿ ವಿಚಾರದಲ್ಲಿ ಜನರಿಗೆ ಕಾಂಗ್ರೆಸ್ ದೋಖಾ ಮಾಡಿದೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಟೀಕಿಸಿದ್ದಾರೆ.

ಕೇಂದ್ರ ಸರ್ಕಾರ ಒಂಬತ್ತು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ನವರು ಚುನಾವಣೆ ಸಂದರ್ಭದಲ್ಲಿ ಎಲ್ಲರಿಗೂ ಉಚಿತ, ನಮಗೂ ಫ್ರೀ ನಿಮಗೂ ಫ್ರೀ ಅಂತ ಜನರಿಗೆ ಭರವಸೆ ನೀಡಿ, ಈಗ ಒಬ್ಬೊಬ್ಬರು ಒಂದೊಂದು ರೀತಿಯ ಹೇಳಿಕೆ ನೀಡುತ್ತಿರುವುದು ನೋಡಿದರೆ ಜನರಿಗೆ ಕಾಂಗ್ರೆಸ್ ದೋಖಾ ಮಾಡಿದೆ.

ತಾತ್ವಿಕ ಆದೇಶದಲ್ಲಿಯೂ ಎಲ್ಲರಿಗೂ ಉಚಿತ ಎಂದು ಹೇಳಿದ್ದರು. ಈಗ ಬೇರೆ ಬೇರೆ ಹೇಳಿಕೆ ನೀಡುತ್ತಿದ್ದಾರೆ.

ಕಾಂಗ್ರೆಸ್ ನವರು ಹೇಳುವುದೊಂದು ಮಾಡುವುದೊಂದು. ಅವರ ಬಣ್ಣ ಬಯಲಾಗುತ್ತದೆ ಎಂದು ವಾಗ್ದಾಳಿ ನಡೆಸಿದರು.

ಕೇಂದ್ರ ಸರ್ಕಾರದ ಎಲ್ಲ ಯೋಜನೆಗಳನ್ನು ರಾಜ್ಯ ಸರ್ಕಾರ ರಾಜ್ಯದ ಜನತೆಗೆ ತಲುಪಿಸುವ ಕೆಲಸ ಮಾಡಬೇಕು. ಇದರಲ್ಲಿ ರಾಜಕಾರಣ ಮಾಡಿದರೆ ರಾಜ್ಯಕ್ಕೆ ನಷ್ಟವಾಗಲಿದೆ.



ಕಿಸಾನ್ ಸಮ್ಮಾನ್ ಯೋಜನೆ ಅಡಿಯಲ್ಲಿ ಸುಮಾರು 54 ಲಕ್ಷ ರೈತರಿಗೆ ಸುಮಾರು 1,6000 ಕೋಟಿ ರೂ. ನೇರವಾಗಿ ರೈತರಿಗೆ ತಲುಪಿದೆ.

ಪ್ರಧಾನ ಮಂತ್ರಿ ಅವಾಸ್ ಯೋಜನೆ ಅಡಿಯಲ್ಲಿ ಎಲ್ಲರಿಗೂ ಸೂರು ಕಲ್ಪಿಸುವ ಕೆಲಸ ಮಾಡಲಾಗಿದೆ. ಮೋದಿ ಅವರು ಪ್ರಧಾನಿಯಾದ ಮೇಲೆ ವಿಶ್ವಮಾನ್ಯತೆ ದೊರೆತಿದೆ ಎಂದು ಅವರು ಹೇಳಿದರು.

ನಳಿನ್ ಕುಮಾರ್ ಕಟೀಲ್, ಮೀನಾಕ್ಷಿ ಲೇಖಿ, ಬಸವರಾಜ ಬೊಮ್ಮಾಯಿ, ಡಾ. ಸಿ.ಅಶ್ವತ್ಥನಾರಾಯಣ

ವಿಶ್ವ ಮಾನ್ಯ ನಾಯಕರಾದಂತಹ ನರೇಂದ್ರಮೋದಿ ನೇತೃತ್ವದ ಸರ್ಕಾರ 9 ವರ್ಷ ಪೂರ್ಣಗೊಳಿಸಿದೆ. ಒಂಭತ್ತು ವರ್ಷದಲ್ಲಿ ಸಾಕಷ್ಟು ಬದಲಾಗಿದೆ. ಪ್ರತಿಯೊಬ್ಬ ನಾಗರಿಕನ ಬದುಕಿನಲ್ಲಿ ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಉನ್ನತೀಕರಣ ಆಗಿರುವುದನ್ನು ನಾವು ನೋಡಿದ್ದೇವೆ.

ಯುಪಿಎ ಅವಧಿಯಲ್ಲಿ ಭಯೋತ್ಪಾದಕ ಚಟುವಟಿಕೆ ಹೆಚ್ಚಾಗಿತ್ತು. ರಾಷ್ಟ್ರದ ಸುರಕ್ಷತೆ ಮತ್ತು ಏಕತೆ ಅಖಂಡತೆಯನ್ನು ಕಾಪಾಡುವ ಕೆಲಸ ಮಾಡಿದರು. ಆರ್ಟಿಕಲ್ 370 ರದ್ದು ಮಾಡುವ ಮೂಲಕ ದೇಶದ ಏಕತೆ ಕಾಪಾಡಿದರು. ಪ್ರಧಾನಿಯಾದ ಮೇಲೆ ಮೋದಿಯವರು ಎಲ್ಲ ಪಕ್ಷಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಜಿ.ಎಸ್.ಟಿ ಜಾರಿಗೆ ತಂದರು.

ಇದರಿಂದ ದೇಶ ಹಾಗೂ ರಾಜ್ಯಗಳ ಆರ್ಥಿಕ ಪ್ರಗತಿ ಹೆಚ್ಚಾಯಿತು. ಮೊದಲ ಐದು ರಾಜ್ಯಗಳಿಗೆ 14% ಗ್ಯಾರಂಟಿ ಫಂಡ್ ಬರುವಂತೆ ಮಾಡಿದರು ಎಂದು ತಿಳಿಸಿದರು.

## 3 ವರ್ಷಗಳ ನಂತರ ವೈರಲ್ ಆಯಿತು ಸಿದ್ದರಾಮಯ್ಯ ವಿರುದ್ಧದ ಪ್ರವೀಣ್ ನೆಟ್ಟಾರು ಟ್ವೀಟ್

ಬೆಂಗಳೂರು: ಕೊಲೆಗೀಡಾಗಿದ್ದ ಹಿಂದೂ ಸಂಘಟನೆ ಮುಖಂಡ ಪ್ರವೀಣ ನೆಟ್ಟಾರು ಅವರ ಪತ್ನಿಗೆ ಈ ಹಿಂದಿನ ಬಿಜೆಪಿ ಸರಕಾರ ನೀಡಿದ್ದ ಗುತ್ತಿಗೆ ಆಧಾರದ ನೌಕರಿಯನ್ನು ಸಿದ್ದರಾಮಯ್ಯ ಸರಕಾರ ರದ್ದುಗೊಳಿಸಿದ ಬೆನ್ನಲ್ಲೇ ವಿವಾದವಾಗಿ ಇದೀಗ ಅವರಿಗೆ ಪುನಃ ಉದ್ಯೋಗ ನೀಡುವ ಭರವಸೆಯನ್ನು ಸಿದ್ದರಾಮಯ್ಯ ನೀಡಿದ್ದಾರೆ.

ವಿಶೇಷ ಪ್ರಕರಣವೆಂದು ಪರಿಗಣಿಸಿ ನೂತನ್ ನೆಟ್ಟಾರು ಅವರನ್ನು ಮರು ನೇಮಕ ಮಾಡಿಕೊಳ್ಳಲಾಗುವುದು ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.

ಆದರೆ ಇದೇ ವೇಳೆ 3 ವರ್ಷಗಳ ಹಿಂದೆ ಸಿದ್ದರಾಮಯ್ಯ ಅವರು ಮಾಡಿದ ಟ್ವೀಟ್ ಒಂದಕ್ಕೆ ಪ್ರವೀಣ್ ನೆಟ್ಟಾರು ಅವರು ತಿರುಗೇಟು ನೀಡಿದ್ದ ಟ್ವೀಟ್ ಒಂದು ಮತ್ತೆ ಮುನ್ನೆಲೆಗೆ ಬಂದಿದೆ.

ನಳಿನಕುಮಾರ್ ಕಟೀಲ್ ಅವರ ಕುರಿತು "ಎಲ್ಲೋ ಬೀದಿ ಅಲೆಯುತ್ತಿದ್ದ ಈ @nalinkateel ಎಂಬ ಪೋಕರಿಯನ್ನು ಯಾರೋ ತಮ್ಮ 'ಸಂತೋಷ'ಕ್ಕಾಗಿ ತಂದು ಪಕ್ಷದ ಅಧ್ಯಕ್ಷರನ್ನಾಗಿ ಮಾಡಿದ್ದರು. ಇವರಿಗೆ ಕೊಟ್ಟಿರುವ ಕೆಲಸ ಪಕ್ಷ ಕಟ್ಟುವುದಲ್ಲ, ಬಿ.ಎಸ್. ಯಡಿಯೂರಪ್ಪನವರನ್ನು ಕೆಡವುದು, ಅದನ್ನೇ ಮಾಡುತ್ತಾ ಇದ್ದಾರೆ" ಎಂದು ಸಿದ್ದರಾಮಯ್ಯ ಟ್ವೀಟ್ ಮಾಡಿದ್ದರು.



ಇದಕ್ಕೆ ಟ್ವೀಟ್ ನಲ್ಲೇ ತಿರುಗೇಟು ನೀಡಿದ್ದ ಪ್ರವೀಣ ನೆಟ್ಟಾರು "ಹಂದಿಗೆ ಸ್ನಾನ ಮಾಡಿಸೋದು ಮತ್ತು ಈ @siddaramaiah ಎಂಬ ಕ್ರೂರಿಗೆ ಬುದ್ಧಿ ಹೇಳೋದು ಎರಡೂ ಒಂದೇ. @nalinkateel ಅವರ ಬಗ್ಗೆ ಮಾತನಾಡುವ ಮೊದಲು ನಿನ್ನ ಯೋಗ್ಯತೆ ಏನು ಅಂಥ ತಿಳ್ಕೊಳ್ಳೋ #ಅಂಡೆಪಿರ್ಕಿ_ಸಿದ್ದರಾಮ" ಎಂದು ಜರಿದಿದ್ದರು.

ಈ ಟ್ವೀಟ್ ಈಗ ಸಖತ್ತಾಗಿ ವೈರಲ್ ಆಗಿದ್ದು ನಾನಾ ರೀತಿಯ ರಾಜಕೀಯ ಚರ್ಚೆಗಳಿಗೆ ಕಾರಣವಾಗಿದೆ.

## ಮಹಿಳೆಯರಿಗೆ ಬಸ್ ಪಾಸ್ ಕೊಟ್ಟೇ ಕೊಡ್ತೇವೆ: ಸ್ಪಷ್ಟನೆ

ಬೆಂಗಳೂರು: ಮಹಿಳೆಯರಿಗೆ ಬಸ್ ಪಾಸ್ ಕೊಟ್ಟೆ ಕೊಡುತ್ತೇವೆ. ವಿರೋಧ ಪಕ್ಷದವರು ತಾಳ್ಮೆಯಿಂದ ಇರಲಿ ಎಂದು ಸಾರಿಗೆ ಹಾಗೂ ಮುಜರಾಯಿ ಇಲಾಖೆಯ ಸಚಿವ ರಾಮಲಿಂಗಾ ರೆಡ್ಡಿ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಮಹಿಳೆಯರಿಗೆ ಪಾಸ್ (ಈಡಿಜಜ ಃಞ ಠಿಚಿ) ವಿಚಾರ ಸಂಬಂಧ ಪ್ರತಿಕ್ರಿಯಿಸಿ, ಈ ಬಗ್ಗೆ ಜೂನ್ 1 ರಂದು ಕ್ಯಾಬಿನೆಟ್ ನಲ್ಲಿ ನಿರ್ಧಾರ ಆಗುತ್ತೆ.



ಮಹಿಳೆಯರಿಗೆ ಬಸ್ ಪಾಸ್ ಕೊಟ್ಟೇ ಕೊಡುತ್ತೇವೆ. ವಿರೋಧ ಪಕ್ಷದವರು ತಾಳ್ಮೆಯಿಂದ ಇರಲಿ. ಆದರೆ ಎಷ್ಟು ಜನ ಓಡಾಡ್ತಾರೆ ಅನ್ನೋ ಬಗ್ಗೆ ಮಾಹಿತಿ ಕೇಳಿದ್ದೇವೆ. ಸ್ಕೂಲ್ ಬಸ್ ಪಾಸ್ ನಂತೆ ಮಹಿಳೆಯರ ಬಸ್ಪಾಸ್ಗೂ ಇಲಾಖೆಗಳಿಗೆ ಹಣ ಕೊಡ್ತೇವೆ ಎಂದರು.

ತಾತ್ವಿಕ ಒಪ್ಪಿಗೆ ಸಿಕ್ಕಿದೆ. ಮಕ್ಕಳಿಗೆ ಬಸ್ ಪಾಸ್ ನಂತೆ ಮಹಿಳೆಯರ ಲೆಕ್ಕದಂತೆ ದುಡ್ಡು ಕೊಡಬೇಕಾಗುತ್ತದೆ. ವಿರೋಧ ಪಕ್ಷದವರು ರಚನಾತ್ಮಕವಾಗಿ ಟೀಕೆ ಮಾಡಲಿ. ಒಟ್ಟನಲ್ಲಿ ಗ್ಯಾರಂಟಿ ಕಾರ್ಡ್ ಕೊಟ್ಟೆ ಕೊಡುತ್ತೇವೆ. ರಾಜ್ಯದ ಮಹಿಳೆಯರಿಗೆ ಮಾತ್ರ ಕೊಡುತ್ತೇವೆ ಎಂದು ತಿಳಿಸಿದರು.

## ಶೀಘ್ರವೇ ಸರ್ಕಾರದ ಎಲ್ಲ ಖಾಲಿ ಹುದ್ದೆಗಳ ಭರ್ತಿ: ಡಿಸಿಎಂ ಡಿ.ಕೆ. ಶಿವಕುಮಾರ್



ಬೆಂಗಳೂರು: ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿನ ಖಾಲಿ ಹುದ್ದಗಳನ್ನು ಶೀಘ್ರವೇ ಭರ್ತಿ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿನ ಖಾಲಿ ಹುದ್ದೆ ಭರ್ತಿ ಮಾಡುವುದಾಗಿ ಜನರಿಗೆ ಮಾತು ನೀಡಿದ್ದೇವೆ. ಕೊಟ್ಟ ಮಾತಿನಂತೆ ಆದಷ್ಟು ಬೇಗ ಹುದ್ದೆ ಭರ್ತಿ ಮಾಡುತ್ತೇವೆ. ಅರ್ಹರನ್ನು ಪಾರದರ್ಶಕವಾಗಿ ನೇಮಿಸುತ್ತೇವೆ ಎಂದು ತಿಳಿಸಿದ್ದಾರೆ. ಕಳೆದ ಸರ್ಕಾರದ ಅವಧಿಯಲ್ಲಿ ನೇಮಕಾತಿ ಪ್ರಕ್ರಿಯೆಯಲ್ಲಿ ಸಾಕಷ್ಟು ಭ್ರಷ್ಟಾಚಾರ ನಡೆದಿದೆ. ಅರ್ಹರನ್ನು ಪಾರದರ್ಶಕವಾಗಿ ನೇಮಿಸಿ, ನಿರುದ್ಯೋಗ ಸಮಸ್ಯೆಯನ್ನು ಬಗೆಹರಿಸುತ್ತೇವೆ. ನೇಮಕಾತಿ ಹಗರಣಗಳಿಂದ ನೊಂದಿರುವ ಅರ್ಹ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸುತ್ತೇವೆ ಎಂದು ಹೇಳಿದ್ದಾರೆ.

## 500 ಉದ್ಯೋಗಗಳಿಗೆ ಜೆಪಿ ಮೊರ್ಗಾನ್ ಚೇಸ್ ಕತ್ತರಿ




ನ್ಯೂಯಾರ್ಕ: ಜೆಪಿ ಮೋರ್ಗಾನ್ ಚೇಸ್ ಆ್ಯಂಡ್ ಕಂಪನಿ ಈ ವಾರ ಸುಮಾರು 500 ಉದ್ಯೋಗಿಗಳನ್ನು ವಜಾಗೊಳಿಸಿದೆ.

ಕೆಯು ಗ್ರಾಹಕ, ವಾಣಿಜ್ಯ ಬ್ಯಾಂಕಿಂಗ್, ಆಸ್ತಿ ಮತ್ತು ಸಂಪತ್ತು ನಿರ್ವಹಣೆ ಸೇರಿದಂತೆ ಬ್ಯಾಂಕ್‌ನ ಪ್ರಮುಖ ವ್ಯವಹಾರಗಳ ಉದ್ಯೋಗಿಗಳ ಮೇಲೆ ಪರಿಣಾಮ ಬೀರಲಿದೆ ಎನ್ನಲಾಗಿದೆ. ಜೆಪಿ ಮೊರ್ಗಾನ್ ಇತ್ತೀಚೆಗೆ ಸ್ವಾಧೀನಪಡಿಸಿಕೊಂಡ ಫಸ್ಟ್ ರಿಪಬ್ಲಿಕ್ ಬ್ಯಾಂಕ್‌ನ ಸುಮಾರು 1,000 ಉದ್ಯೋಗಿಗಳನ್ನು ವಜಾಗೊಳಿಸುತ್ತಿದೆ ಎಂದು ಮೂಲಗಳು ತಿಳಿಸಿವೆ.

ಇದರ ಭಾಗವಾಗಿ ತನ್ನ ವಿವಿಧ ಇಲಾಖೆಗಳಲ್ಲಿ ಈ ವಾರ ಸುಮಾರು 500 ಉದ್ಯೋಗಿಗಳನ್ನು ಕಡಿತಗೊಳಿಸಿದೆ. ಬ್ಯಾಂಕ್‌ನಲ್ಲಿ ಪ್ರಸ್ತುತ 13,000 ಕ್ಕೂ ಹೆಚ್ಚು ಉದ್ಯೋಗಿಗಳಿದ್ದಾರೆ. ಈ ಬಗ್ಗೆ ಜೆ.ಪಿ. ಮೊರ್ಗಾನ್ ಪ್ರತಿಕ್ರಿಯೆ ನೀಡಲು ನಿರಾಕರಿಸಿದೆ.

## ಎದೆಯ ಮೇಲೆ ಅಪ್ಪು ಹೆಸರು ಟ್ಯಾಟೂ ಹಾಕಿಸಿಕೊಂಡ ರಾಘಣ್ಣ



ಬೆಂಗಳೂರು: ದಿವಂಗತ ಪುನೀತ್ ರಾಜ್‌ಕುಮಾರ್ ಅವರು ನಮ್ಮನ್ನ ಅಗಲಿ 2 ವರ್ಷಗಳಾಗಿದೆ. ಆದರೆ ಅಪ್ಪು ನೆನಪು ಮಾತ್ರ ಮಾಸಿಲ್ಲ. ಅಭಿಮಾನಿಗಳ ಮನದಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ. ಇಂದಿಗೂ ಪುನೀತ್ ಕುಟುಂಬಕ್ಕೆ ಅಪ್ಪು ಅಗಲಿಕೆಯನ್ನ ಒಪ್ಪಿಕೊಳ್ಳೋಕೆ ಸಾಧ್ಯವಾಗುತ್ತಿಲ್ಲ. ಹೀಗಿರುವಾಗ ಅಪ್ಪು ಹೆಸರನ್ನ ಎದೆಯ ಮೇಲೆ ಟ್ಯಾಟೂ ಹಾಕಿಸಿಕೊಂಡಿದ್ದಾರೆ.

# ವಿಶೇಷ ಘಟಕ ಯೋಜನೆ, ಗಿರಿಜನ ಉಪಯೋಜನೆ ಪ್ರಗತಿ ಪರಿಶೀಲನೆ



ಕೊಪ್ಪಳ: ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಅಧಿನಿಯಮ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ಎಂ.ಸುಂದರೇಶಬಾಬು ಅವರ ಅಧ್ಯಕ್ಷತೆಯಲ್ಲಿ 2023–24ನೇ ಸಾಲಿನ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಪ್ರಗತಿ ಪರಿಶೀಲನಾ ಸಭೆಯು ಮೇ 29ರಂದು ನಡೆಯಿತು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ವಿವಿಧ ಇಲಾಖೆಯ ಅನುಷ್ಠಾನಾಧಿಕಾರಿಗಳೊಂದಿಗೆ, 2023–24ನೇ ಸಾಲಿನ ಏಪ್ರೀಲ್–2023 ಅಂತ್ಯದವರೆಗಿನ ಎಸ್ಸಿಪಿ ಮತ್ತು ಟಿಎಸ್ಪಿ ಅನುದಾನ ಬಿಡುಗಡೆ ಮತ್ತು ಬಳಕೆಯಾದ ಬಗ್ಗೆ ಇಲಾಖಾವಾರು ಜಿಲ್ಲಾಧಿಕಾರಿಗಳು ಪರಿಶೀಲಿಸಿದರು.

2023–24ನೇ ಸಾಲಿನಲ್ಲಿ ಇದುವರೆಗೆ ಆರ್ಥಿಕ ಮತ್ತು ಭೌತಿಕ ಗುರಿ ನಿಗದಿಯಾಗಿರುವುದಿಲ್ಲ. ಕೇಂದ್ರ ಕಚೇರಿಗಳಿಂದ ಕ್ರಿಯಾಯೋಜನೆಗೆ ಅನುಮೋದನೆ ಆಗುವ ಪ್ರಕ್ರಿಯೆಯ ಹಂತದಲ್ಲಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.


ಈ ವೇಳೆ ಜಿಲ್ಲಾಧಿಕಾರಿಗಳು ಮಾತನಾಡಿ, ಪ್ರಸಕ್ತ ಹಣಕಾಸು ವರ್ಷದಲ್ಲಿ ಸಹ ಎಸ್ಸಿಪಿ ಮತ್ತು ಟಿಎಸ್ಪಿ ಭೌತಿಕ ಮತ್ತು ಆರ್ಥಿಕ ಗುರಿ ಸಾಧನೆಗೆ ಹೆಚ್ಚಿನ ಒತ್ತು ಕೊಡಬೇಕು. ಕ್ರಿಯಾಯೋಜನೆಗೆ ಅನುಮೋದನೆ ದೊರೆತ ಕೂಡಲೇ ಮತ್ತು ಆಯಾ ಇಲಾಖಾ ಯೋಜನೆಗಳಿಗೆ ಅನುದಾನ ಬಿಡುಗಡೆ ತಕ್ಷಣ ವಿಳಂಬ ಮಾಡದೇ ಯೋಜನೆಗಳ ಅನುಷ್ಠಾನಕ್ಕೆ ಮುಂದಾಗಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

*ಸಕಾಲ ಅರ್ಜಿಗಳ ಪರಿಶೀಲನೆ:* ಸಕಾಲ ಅರ್ಜಿಗಳ ಬಗ್ಗೆ ಸಹ ಜಿಲ್ಲಾಧಿಕಾರಿಗಳು ಪರಿಶೀಲಿಸಿದರು. ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿಗಳು, ಸಕಾಲ ಸೇವೆಗಳ ನಿಯಮಗಳನ್ನು ಸರಿಯಾಗಿ ಪಾಲನೆ ಮಾಡಬೇಕು. ನಾಗರಿಕರಿಗೆ ನಿಗದಿತ ಕಾಲಾವಧಿಯೊಳಗೆ ಖಾತರಿ ಸೇವೆ ನೀಡುವ ನಿಟ್ಟಿನಲ್ಲಿ ಈ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಸಹ ಅಧಿಕಾರಿಗಳು ಹೆಚ್ಚಿನ ಒತ್ತು ಕೊಡಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಕಾಲ ಅರ್ಜಿಗಳ ವಿಲೇವಾರಿಗೆ ಅಧಿಕಾರಿಗಳು ಮತ್ತು ಸಿಬ್ಬಂದಿಯು ಅನಗತ್ಯ ವಿಳಂಬ ಮಾಡುವುದು ಕಂಡು ಬಂದಲ್ಲಿ ಶಿಸ್ತು ಕ್ರಮ ಜರುಗಿಸುವುದಾಗಿ ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಕಾವ್ಯರಾಣಿ ಕೆ.ವಿ., ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಂಜುನಾಥ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಚಿದಾನಂದ ಕುರಿ ಸೇರಿದಂತೆ ಇನ್ನಿತರ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಗ್ಯಾರಂಟಿ ಯೋಜನೆ ಜಾರಿ ಖಚಿತ ತಾಳ್ಮೆ ಇರಲಿ: ಹೆಬ್ಬಾಳ್ಕರ್



ಬೆಳಗಾವಿ: 'ಮಹಿಳೆಯರಿಗೆ ಉಚಿತ ಪ್ರಯಾಣ ಸೌಲಭ್ಯವೂ ಸೇರಿದಂತೆ ಜನರಿಗೆ ನೀಡಿದ ಎಲ್ಲ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುತ್ತೇವೆ.

ಪ್ರತಿಪಕ್ಷದವರು ತುಸು ತಾಳ್ಮೆಯಿಂದ ಇರಬೇಕು' ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಹೇಳಿದರು.

ನಗರದಲ್ಲಿ ಸೋಮವಾರ ಮಾಧ್ಯಮ ದವರೊಂದಿಗೆ ಮಾತನಾಡಿದ ಅವರು, 'ಚುನಾವಣೆ ಸಂದರ್ಭದಲ್ಲಿ ನೀಡಿದ ಎಲ್ಲ ಭರವಸೆಯನ್ನು ಹಂತವಾಗಿ ಈಡೇರಿಸುತ್ತೇವೆ. ಈಗಾಗಲೇ ಇದರ ಸಿದ್ಧತೆಗಳು ಆರಂಭವಾಗಿವೆ.

ತುಸು ಸಮಯ ಬೇಕು. ಹಾಗೆಂದು ಬಹಳ ದಿನ ಜನರನ್ನು ಕಾಯಿಸುವುದಿಲ್ಲ' ಎಂದರು.

ಪ್ರತಿಯೊಬ್ಬರ ಖಾತೆಗೆ ರೂ 15 ಲಕ್ಷ ಹಾಕುತ್ತೇವೆ ಎಂದು ಬಿಜೆಪಿಯವರು ಹೇಳಿ 14 ವರ್ಷ ಕಳೆದಿವೆ. ಅವರು ಜನರನ್ನು ನಂಬಿಸಿ ಕೈ ಕೊಟ್ಟರು. ಆದರೆ ನಾವು ಹಾಗಲ್ಲ.

ವಾಗ್ದಾನ ಮಾಡಿದಂತೆ ಯೋಜನೆ ಜಾರಿಗೊಳಿಸುತ್ತೇವೆ. ತೀರ ವಿಳಂಬ ಮಾಡುವುದಿಲ್ಲ' ಎಂದೂ ಹೇಳಿದರು.

'ನನಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜವಾಬ್ದಾರಿ ಸಿಕ್ಕಿದ್ದು ಖುಷಿ ತಂದಿದೆ.

ಒಳ್ಳೆಯ ಕೆಲಸ ಮಾಡಲು ಈ ಇಲಾಖೆಯಲ್ಲಿ ಸಾಕಷ್ಟು ಅವಕಾಶಗಳಿವೆ. ಎಲ್ಲ ಬಳಸಿಕೊಂಡು ಸಮರ್ಥವಾಗಿ ನಿಭಾಯಿಸುತ್ತೇನೆ' ಎಂದೂ ಸಚಿವೆ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

# ನರೇಗಾ ಕೂಲಿಕಾರರಿಂದ ಮಳೆ–ಬೆಳೆಗೆ ಪ್ರಾರ್ಥನೆ



ಕೊಪ್ಪಳ: ತಾಲೂಕಿನ ಹಲಗೇರಿ ಗ್ರಾಮ ಪಂಚಾಯತಿಯ ಹಲಗೇರಿ ಗ್ರಾಮದಲ್ಲಿ ನರೇಗಾ ಕಾರ್ಯದಲ್ಲಿ ನಿರತರಾಗಿದ್ದ ಕೂಲಿ ಕಾರ್ಮಿಕರು, ಬರುವ ದಿನಗಳಲ್ಲಿ ಗ್ರಾಮದಲ್ಲಿ ಮಳೆ–ಬೆಳೆ ಚೆನ್ನಾಗಿ ಆಗಲೆಂದು ಮೇ 29ರಂದು ಗ್ರಾಮ ದೇವತೆಗೆ ಉಡಿ ತುಂಬಿ ಶ್ರದ್ಧಾಪೂರ್ವಕವಾಗಿ ಪೂಜೆ ನೆರವೇರಿಸಿದರು.

ಈ ವೇಳೆ ಹಲಗೇರಿ ಗ್ರಾಮ ಪಂಚಾಯತ ಅಧ್ಯಕ್ಷೆ ಶರಣಮ್ಮ ತಳವಾರ, ಗ್ರಾಮ ಪಂಚಾಯತ್ ಸದಸ್ಯ ಜಗದೀಶ ಓಜನಹಳ್ಳಿ, ಕಾಯಕ ಮಿತ್ರ ವಿಜಯಲಕ್ಷ್ಮಿ ಉಳಗೇರ, 11 ಕಾಯಕ ಬಂಧುಗಳು ಮತ್ತು ಇನ್ನಿತರರು ಹಾಜರಿದ್ದರು.

ಗ್ರಾಮ ದೇವತೆ ಶಾಂಭವಿ ಕೆರೆ ಎಂದೇ ಹೆಸರಾದ ಕೆರೆಯಲ್ಲಿ ಈ ಕಾರ್ಯಕ್ರಮ ನಡೆಯಿತು. ಮಹಾತ್ಮಾ ಗಾಂಧಿ ನರೇಗಾದಡಿ ಕೆರೆ ಹೂಳೆತ್ತುವ ಕಾಮಗಾರಿಯಲ್ಲಿ 7 ದಿನಗಳ ಅವಧಿಯ 410 ಕೂಲಿಕಾರರಿಗೆ ಕೂಲಿ ಕೆಲಸ ನೀಡಲಾಗಿದೆ.

ಜಿಲ್ಲಾಧಿಕಾರಿಗಳು ಮತ್ತು ಜಿಪಂ ಸಿಇಓ ಅವರ ನಿರ್ದೇಶನದಂತೆ ಜಿಲ್ಲೆಯಲ್ಲಿ ನರೇಗಾ ಯೋಜನೆಯ ಅನುಷ್ಠಾನಕ್ಕೆ ಒತ್ತು ಕೊಡಲಾಗಿದೆ ಎಂದು ಇದೆ ವೇಳೆ ಕೊಪ್ಪಳ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ದುಂಡಪ್ಪ ತುರಾದಿ ಅವರು ತಿಳಿಸಿದರು.

# ಮಕ್ಕಳ ಹಕ್ಕುಗಳ ಅನುಷ್ಠಾನಗೊಳಿಸುತ್ತಿರುವ ಬಗ್ಗೆ ಪರಿಶೀಲನೆ



ಬೆಳಗಾವಿ: ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶ್ರೀಮತಿ ಅಪರ್ಣಾ ಕೊಳ್ಳರವರು ಬೆಳಗಾವಿ ಜಿಲ್ಲೆಗೆ ಭೇಟ್ಟಿ ನೀಡಿ ಮಕ್ಕಳ ಹಕ್ಕುಗಳನ್ನು ಅನುಷ್ಠಾನಗೊಳಿಸುತ್ತಿರುವ ಬಗ್ಗೆ ಪರಿಶೀಲಿಸಿದರು.

ಈ ಭೇಟ್ಟಿಯ ಸಂದರ್ಭದಲ್ಲಿ ಚಿಕ್ಕೋಡಿಯ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್‌ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ, ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಮತ್ತು ತಾಲೂಕಾ ಸಾರ್ವಜನಿಕ ಆಸ್ಪತ್ರೆಯ ಎನ್.ಆರ್.ಸಿ ಕೇಂದ್ರ, ಹಾಗೂ ಬೆಳಗಾವಿ ನಗರದ ಶಿವಾಜಿ ನಗರದಲ್ಲಿರುವ ಪುರುಷರ ಅನುಪಾಲನಾ ಗೃಹ, ಬಾಲಕರ ಬಾಲ ಮಂದಿರ, ಪರಿವೀಕ್ಷಣಾಲಯಗಳಿಗೆ ಭೇಟ್ಟಿ ನೀಡಿ ಪರಿಶೀಲಿಸಿದರು.

ದಿನಾಂಕ 29/05/2023 ರಂದು ಸ್ವಾಮಿ ವಿವೇಕಾನಂದ ಸೇವಾ ಪ್ರತಿಷ್ಠಾನದ ದತ್ತು ಸ್ವೀಕಾರ ಕೇಂದ್ರ, ನಿರ್ಗತಿಕ ಮಕ್ಕಳ ಕುಟೀರ, ಅನಾಥಾಶ್ರಮಗಳಿಗೆ ಭೇಟ್ಟಿ ನೀಡಿ ಪರಿಶೀಲಿಸಿದರು. ನಂತರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನೂತನ ಸಚಿವರಾದ ಶ್ರೀಮತಿ ಲಕ್ಷ್ಮೀ ಹೆಬ್ಬಾಳ್ಕರರವರಿಗೆ ಭೇಟ್ಟಿ ಮಾಡಿ ಬೆಳಗಾವಿ ಜಿಲ್ಲೆಯಲ್ಲಿ ಮಕ್ಕಳ ಹಕ್ಕುಗಳು ಅನುಷ್ಠಾನವಾಗುತ್ತಿರುವ ಬಗ್ಗೆ ಹಾಗೂ ಅಪೌಷ್ಠಿಕತೆಯ ಬಗ್ಗೆ ವಿಸ್ತ್ರತವಾಗಿ ಚರ್ಚಿಸಿದರು.

ತದನಂತರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ (ಡಿ.ಎಲ್.ಎಸ್.ಎ) ಸದಸ್ಯ ಕಾರ್ಯದರ್ಶಿಗಳೂ ಆದ ನ್ಯಾಯಾಧೀಶರಾದ ಶ್ರೀ ಮುರಳಿ ಮೋಹನ ರೆಡ್ಡಿಯವರನ್ನು ಭೇಟ್ಟಿ ಆಗಿ ಮಕ್ಕಳ ಹಕ್ಕುಗಳ ಹಾಗೂ ಅಪೌಷ್ಟಿಕತೆಯ ಬಗ್ಗೆ ಚರ್ಚಿಸಿದರು.

ಬೆಳಗಾವಿ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಶ್ರೀ ನಿತೇಶ ಕೆ ಪಾಟೀಲರ ವರೊಂದಿಗೆ ಚರ್ಚಿಸುತ್ತಾ, ಬೆಳಗಾವಿ ಜಿಲ್ಲೆಯಲ್ಲಿ ನಡೆಯುತ್ತಿರುವ ಮಕ್ಕಳ ಪಾಲನಾ ಸಂಸ್ಥೆಗಳು ಸರ್ಕಾರದ ವಿವಿಧ ಇಲಾಖೆಗಳಡಿಯಲ್ಲಿ ನಡೆಯುತ್ತಿರುವ ಹಾಸ್ಟೆಲ್‌ಗಳ ವಿದ್ಯಾರ್ಥಿಗಳ ಕುರಿತು ಕಲಿಕಾ ಫಲಿತಾಂಶದ ವರದಿ, ಶಾಲೆಗಳು ಶಿಥಿಲಗೊಂಡಿರುವ ಬಗ್ಗೆ ಮತ್ತು ಬಾಲ್ಯ ವಿವಾಹ ಹಾಗೂ ಬಾಲ ಕಾರ್ಮಿಕತೆಯ ಬಗ್ಗೆ ಚರ್ಚಿಸಿದರು.

ಜಿಲ್ಲಾಧಿಕಾರಿಗಳು ಪ್ರತಿಕ್ರಿಯಿಸಿ ಅಂಗನವಾಡಿ ಕೇಂದ್ರಗಳ ಮಕ್ಕಳ ಹಿತದೃಷ್ಟಿಯಿಂದ ಕಳೆದ ವರ್ಷದ ವಿಪತ್ತಿನಿಂದಾ ಹಾನಿಯಾದ ಕಟ್ಟಡಗಳಿಗೆ ದುರಸ್ತಿ ಕಾರ್ಯಕ್ಕಾಗಿ ಬಿಡುಗಡೆಯಾದ ಒಟ್ಟು 10 ಕೋಟಿ ಅನುದಾನದಲ್ಲಿ 4 ಕೋಟಿಗಳಲ್ಲಿ 200 ಅಂಗನವಾಡಿ ಕೇಂದ್ರಗಳ ಮತ್ತು 4 ಕೋಟಿಯಲ್ಲಿ ಶಾಲಾ ಕಟ್ಟಡಗಳ ರಿಪೇರಿಗೆ ಒತ್ತು ನೀಡಲಾಗಿದೆ ಎಂದು ಮಾನ್ಯ ಜಿಲ್ಲಾಧಿಕಾರಿಗಳು ತಿಳಿಸಿದರು. ಈ ಭೇಟ್ಟಿಯ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಶ್ರೀ ಬಸವರಾಜ್ ಎ ಎಂ, ಜಿಲ್ಲಾ ಮಕ್ಕಳ ಸಂರಕ್ಷಣಾಧಿಕಾರಿಗಳಾದ ಶ್ರೀ ಮಹಾಂತೇಶ ಭಜಂತ್ರಿ, ಹಾಗೂ ಸಚಿನ ಹಿರೇಮಠ, ಮಹೇಶ ಸಂಗಾನಟ್ಟಿ, ಶ್ರೀದೇವಿ ಗುಳ್ಳ ಇವರು ಹಾಜರಿದ್ದರು.

# ವಿಶ್ವ ತಂಬಾಕು ರಹಿತ ದಿನಾಚರಣೆ: ವಿದ್ಯಾರ್ಥಿಗಳಿಗೆ ಆರೋಗ್ಯ ಶಿಕ್ಷಣ ಜಾಗೃತಿ



ಕೊಪ್ಪಳ: ವಿಶ್ವ ತಂಬಾಕು ರಹಿತ ದಿನಾಚರಣೆಯ ಅಂಗವಾಗಿ ಶ್ರೀ ಗವಿಸಿದ್ದೇಶ್ವರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಮೇ 26ರಂದು ಕಾಲೇಜು ವಿದ್ಯಾರ್ಥಿಗಳಿಗೆ ಆರೋಗ್ಯ ಶಿಕ್ಷಣ ಜಾಗೃತಿ ಮೂಡಿಸಲಾಯಿತು.

ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ತಾಲೂಕ ಆರೋಗ್ಯಾಧಿಕಾರಿಗಳು, ಕೊಪ್ಪಳ ಇವರ ಸಂಯುಕ್ತ ಆಶ್ರಯದಲ್ಲಿ ವಿಶ್ವ ತಂಬಾಕು ರಹಿತ ದಿನಾಚರಣೆಯ ಅಂಗವಾಗಿ ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಕಾಲೇಜು ವಿದ್ಯಾರ್ಥಿಗಳಿಗೆ "ನಮಗೆ ಆಹಾರ ಬೇಕು ತಂಬಾಕು ಅಲ್ಲ" ಘೋಷವಾಕ್ಯನ್ನೊಳಗೊಂಡು ತಂಬಾಕು ಸೇವನೆಯಿಂದ ಆರೋಗ್ಯ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಆರೋಗ್ಯ ಶಿಕ್ಷಣ ನೀಡುವ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಜಿಲ್ಲಾ ಸಲಹೆಗಾರರಾದ ಡಾ.ಗುರುಪ್ರಸಾದ ಅವರ ಪ್ರಾಸ್ತವಿಕವಾಗಿ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಕೂಡ 31 ಮೇ ರಂದು ವಿಶ್ವ ತಂಬಾಕು ರಹಿತ ದಿನವನ್ನು ಆಚರಿಸಲಾಗುತ್ತಿದೆ. ತಂಬಾಕು ಸೇವನೆಯಿಂದ ಬಾಯಿ ಕ್ಯಾನ್ಸರ್, ಶ್ವಾಸಕೋಶದ ಕ್ಯಾನ್ಸರ್ ಕುರಿತಾದ ಸಂಪೂರ್ಣ ಮಾಹಿತಿಯನ್ನು ಮತ್ತು ತಂಬಾಕು ಸೇವನೆ ಬದಲಾಗಿ ಪೌಷ್ಠಿಕ ಆಹಾರ ಸೇವನೆಯಿಂದ ಆಹಾರದ ಮೇಲೆ ಉಂಟಾಗುವ ಲಾಭಗಳ ಕುರಿತು ವಿವರಿಸಿದರು. ಈ ವರ್ಷದ ಘೋಷವಾಕ್ಯದಂತೆ ಕಾಲೇಜು ವಿದ್ಯಾರ್ಥಿಗಳು "ನಮಗೆ ಆಹಾರ ಬೇಕು ತಂಬಾಕು ಅಲ್ಲ" ಕುರಿತು ತಮ್ಮ ಸ್ನೇಹಿತರಿಗೆ ಅರಿವು ಮೂಡಿಸಬೇಕು ಎಂದರು.

ಜಿಲ್ಲಾ ಆಸ್ಪತ್ರೆಯ ಸೈಕಾಲಾಜಿಸ್ಟ್ ಶಾಂತಮ್ಮ ಕಟ್ಟಿಮನಿ ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ತಂಬಾಕು ಸೇವನೆಗೆ ಯುವಕರು ಬಲಿಯಾಗುತ್ತಿದ್ದು, ಈ ವರ್ಷ ಮೇ 31 ರಂದು "ವಿಶ್ವ ತಂಬಾಕು ರಹಿತ ದಿನಾಚರಣೆ" ಅಂಗವಾಗಿ ಇಂದಿನ ಯುವಕರು ನಾಳಿನ ಪ್ರಜೆಗಳು ಆ ಹಿನ್ನಲೆಯಲ್ಲಿ ಪೌಷ್ಠಿಕ ಆಹಾರವನ್ನು ಸೇವಿಸಿ ತಂಬಾಕನ್ನಲ್ಲ ಮತ್ತು ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿ ದೊರೆಯುವ ಸೌಲಭ್ಯಗಳ ಕುರಿತು ವಿವರಿಸಿದರು. ಹಾಗೂ ಪ್ರತ್ಯಕ್ಷ ಧೂಮಪಾನ ಮತ್ತು ಪರೋಕ್ಷ ಧೂಮಪಾನದಿಂದ ಆರೋಗ್ಯದ ಮೇಲಾಗುವ ಅದರಲ್ಲಿ ಗರ್ಭಿಣಿ ಮಹಿಳೆಯರಲ್ಲಿ ಕಡಿಮೆ ತೂಕದ ಮಗು ಜನನ, ಅಕಾಲಿಕ ಮರಣ, ಅವಧಿಗೆ ಮುಂಚೆ ಜನನ ಈ ಎಲ್ಲಾ ತೊಂದರೆಗಳು ಪರೋಕ್ಷ ಧೂಮಪಾನದಿಂದ ಉಂಟಾಗುತ್ತವೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ಅವರು ಮಾತನಾಡಿ, ತಂಬಾಕು ಸೇವನೆಯಿಂದ ಆರೋಗ್ಯ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಕಾಲೇಜು ವಿದ್ಯಾರ್ಥಿಗಳಿಗೆ ಆರೋಗ್ಯ ಶಿಕ್ಷಣ ನೀಡಲು ಜಾಗೃತಿ ಕಾರ್ಯಕ್ರಮ ಏರ್ಪಡಿಸಲಾಗಿದೆ. ತಂಬಾಕು ಸೇವನೆಯಿಂದ ದೂರವಿರಬೇಕು ಪೌಷ್ಠಿಕ ಆಹಾರ ಸೇವಿಸಿ ಆರೋಗ್ಯ ಕಾಪಾಡಿಕೊಳ್ಳಿ ತಂಬಾಕು ಸೇವನೆ ಆರೋಗ್ಯಕ್ಕೆ ಹಾನಿಕಾರಕ ಅದರಿಂದ ತಂಬಾಕಿನಿಂದ ದೂರವಿದ್ದು ಯುವ ಪೀಳಿಗೆಯನ್ನು ರಕ್ಷಿಸಿಕೊಳ್ಳಬೇಕು.

ತಂಬಾಕಿನ ಬಗೆಗಿನ ಸತ್ಯಾಂಶಗಳು ಮತ್ತು ವಿಶ್ವದಾದ್ಯಂತ ತಂಬಾಕು ಸೇವನೆಯಿಂದ ಮತ್ತು ಧೂಮಪಾನದಿಂದ ಬರಬಹುದಾದಂತಹ ಖಾಯಿಲೆಗಳ ಬಗ್ಗೆ ಮತ್ತು ತಂಬಾಕು ವಸ್ತುಗಳಲ್ಲಿ 7000 ರಾಸಾಯನಿಕ ವಸ್ತುಗಳಿದ್ದು ಅದರಲ್ಲಿ 69 ರಷ್ಟು ಕ್ಯಾನ್ಸರ್ ಕಾರಕ ವಸ್ತುಗಳಿರುವುದನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಗವಿಸಿದ್ದೇಶ್ವರ ಶಿಕ್ಷಣ ಮಹಾವಿದ್ಯಾಲಯದ ಪ್ರಾಧ್ಯಾಪಕರು, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಅಧಿಕಾರಿಗಳು, ಸಿಬ್ಬಂದಿ ಸೇರಿದಂತೆ ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿಶ್ವ ತಂಬಾಕು ರಹಿತ ದಿನಾಚರಣೆಯ ಅಂಗವಾಗಿ ಕಾಲೇಜು ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಇದೇ ಸಂದರ್ಭದಲ್ಲಿ ಏರ್ಪಡಿಸಲಾಯಿತು.

# ಅಕ್ರಮ ಕಲ್ಲು ಗಣಿಗಾರಿಕೆಗೆ ಕಡಿವಾಣ ಯಾವಾಗ? ಕಲ್ಲು ಕ್ವಾರಿಯ ಕರಾಳತೆ ಹೇಗಿದೆ?





ಬೆಳಗಾವಿ ಹಾಗೂ ತಾಲೂಕಿನಾದ್ಯಂತ ಸಂಭವಿಸಿದ ಜಿಲೆಟಿನ್ ಸ್ಫೋಟ ರಾಜ್ಯದಲ್ಲಿನ ಅಕ್ರಮ ಕಲ್ಲು ಗಣಿಗಾರಿಕೆಯ ಕರಾಳತೆಯನ್ನು ಬಿಚ್ಚಿಟ್ಟಿದೆ. ಕಲ್ಲುಗಣಿಗಾರಿಕೆಯಿಂದ ಏನೆಲ್ಲ ಹಾನಿಯಾಗ್ತಾ ಇದೆ? ಪ್ರಾಣಹಾನಿ ಸಂಭವಿಸುತ್ತಿದ್ದರು ಸರಕಾರ ಯಾಕೆ ಅಕ್ರಮ ಕಲ್ಲು ಗಣಿಗಾರಿಕೆಗೆ ಬ್ರೆಕ್ ಹಾಕುತ್ತಿಲ್ಲ?

ಬೆಳಗಾವಿ ಜಿಲ್ಲೆಯಾದ್ಯಂತ ಕಲ್ಲು ಕ್ವಾರಿಯು ಅನುಮತಿಯನ್ನು ಪಡೆಯದೆ ಅಕ್ರಮವಾಗಿ ಕಾರ್ಯವನ್ನು ನಿರ್ವಹಿಸುತ್ತಿದ್ದು.

ಸರಕಾರ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯ ಎದ್ದು ಕಾಣುತ್ತಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹಳ್ಳಿಗಳ ಬೆಟ್ಟಗುಡ್ಡಗಳನ್ನೆಲ್ಲ ನುಂಗಿ ಹಾಕುತ್ತಿರುವ ಕಲ್ಲು ಗಣಿಗಾರಿಕೆಯ ಬೇರೂ ರಾಜ್ಯಾದ್ಯಂತ ವ್ಯಾಪಿಸಿದ್ದು, ಕಳೆದ ನಾಲ್ಕು ವರ್ಷಗಳ ಅವಧಿಯಲ್ಲಿ 2 ಸಾವಿರಕ್ಕೂ ಅಧಿಕ ಅಕ್ರಮ ಗಣಿಗಾರಿಕೆ ಕ್ವಾರಿಗಳು ಪತ್ತೆಯಾಗಿವೆ! ಗಣಿ ಮತ್ತು ಭೂ ವಿಜ್ಞಾನ ಇಲಾಖೆ ನೀಡಿರುವ ಅಂಕಿ–ಅಂಶದ ಪ್ರಕಾರ, 2017–18 ರಲ್ಲಿ ರಾಜ್ಯದಲ್ಲಿ 404 ಅಕ್ರಮ ಕಲ್ಲು ಗಣಿಗಾರಿಕೆ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿತ್ತು. 2019 ರಿಂದ 2021 ರ ನಡುವೆ ಸುಮಾರು 1783 ಅಕ್ರಮ ಕಲ್ಲು ಗಣಿಗಾರಿಕೆ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ.

ಅಂದರೆ ರಾಜ್ಯದಲ್ಲಿ 2187 ಅಕ್ರಮ ಕಲ್ಲುಗಣಿಗಾರಿಕೆಗಳು ಇವೆ ಎಂದು ಇಲಾಖೆಯ ದಾಖಲೆಗಳು ಹೇಳುತ್ತಿವೆ.

ಅಕ್ರಮ ಕಲ್ಲು ಕ್ವಾರಿಗಳಿಗೆ ಅಂಕುಶ ಹಾಕುವಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ವಿಫಲರಾಗಿದ್ದಾರೆ ಎಂಬ ವಾಸ್ತವಾಂಶವನ್ನು ಸಮೀಕ್ಷೆಯನ್ನು ನಡೆಸಿ ಸ್ಯಾಟಲೈಟ್ ಚಿತ್ರಗಳ ಮೂಲಕ ಅಕ್ರಮ ಕಲ್ಲು ಗಣಿಗಾರಿಕೆಯನ್ನು ಪತ್ತೆ ಮಾಡಿದ್ದರು. ಅವರ ವರದಿಯ ಪ್ರಕಾರವೂ 2000 ಕ್ಕೂ ಅಕ್ರಮ ಕಲ್ಲು ಕ್ವಾರಿಗಳಿರುವುದು ಸಾಬೀತಾಗಿದೆ. ಹಾಗಾದ್ರೆ ಅನುಮತಿ ಪಡೆದಿರುವ ಕಲ್ಲು ಕ್ವಾರಿಗಳು ಎಷ್ಟು ಎನ್ನುವ ಪ್ರಶ್ನೆ ಸಹಜವಾಗಿ ಮೂಡುತ್ತೆ? ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಮಾಹಿತಿಯಂತೆ ರಾಜ್ಯದಲ್ಲಿ ಇಲ್ಲಿವರೆಗೆ 450 ಅಲಂಕರಿತ ಕಲ್ಲು ಕ್ವಾರಿಗಳು (ಟೈಲ್ಸ್ ಕಲ್ಲು) ಹಾಗೂ 300 ಸಾಮಾನ್ಯ ಕಲ್ಲು ಕ್ವಾರಿಗಳಿಗೆ ಅನುಮತಿ ನೀಡಲಾಗಿದೆ.

ಅನುಮತಿ ಪಡೆದ ಕಲ್ಲು ಗಣಿ ಗುತ್ತಿಗೆದಾರರು ತಮಗೆ ಮಂಜೂರಾದ ಗುತ್ತಿಗೆ ಪ್ರದೇಶದ ವ್ಯಾಪ್ತಿ ಮೀರಿ ಗಣಿಗಾರಿಕೆ, ಹೊರಗಡೆ ಅಥವಾ ಗುತ್ತಿಗೆ ಅವಧಿ ಮುಗಿದರೂ ಗಣಿಗಾರಿಕೆ ಮಾಡುತ್ತಿರುವುದು ಸಿಎಜಿ ವರದಿ ಮೂಲಕ ಬೆಳಕಿಗೆ ಬಂದಿದೆ. ಸಿಎಜಿ ವರದಿಯಲ್ಲಿನ ಒಂದು ಅಂಕಿ–ಅಂಶವನ್ನು ಗಮನಿಸುವುದಾದರೆ, ಅಂದ್ರೆ ಅಕ್ರಮ ಗಣಿಗಾರಿಕೆ ಎಲ್ಲಿ ಹೆಚ್ಚೆಚ್ಚು ನಡೀತಾ ಇದೆ, ಎನ್ನುವ ಅಂಶವನ್ನು ಸಿಎಜಿ ವರದಿಯಲ್ಲಿ ಬಯಲು ಮಾಡಲಾಗಿದೆ. ದಕ್ಷಿಣ ಕನ್ನಡ, ವಿಜಯಪುರ, ಬೆಳಗಾವಿ, ಬೆಂಗಳೂರು ಗ್ರಾಮಾಂತರ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಇಂಥ ಪ್ರಕರಣಗಳು ಪತ್ತೆಯಾಗಿವೆ. ರಾಜ್ಯದಲ್ಲಿ ಸುಮಾರು 957 ಕೋಟಿ 16 ಲಕ್ಷದ 93 ಸಾವಿರ ಟನ್ ಗ್ರಾನೈಟ್ ಕಲ್ಲು ಖನಿಜ ಇದ್ದು, ಇದರ ವ್ಯಾಪ್ತಿ ಪ್ರದೇಶ ಎಷ್ಟಿದೆ ಅಂದರೆ ಸುಮಾರು 4,200 ಸ್ಕ್ವೇರ್ ಕಿಲೋ ಮೀಟರ್ ನಷ್ಟು ಇದೆ.

ಈ ಅಕ್ರಮ ಕಲ್ಲು ಗಾಣಿಗಾರಿಕೆಯನ್ನು ತಡೆ ಹಿಡಿಯದಿರುವುದಕ್ಕೆ ಕಾರಣವಿದೆ. ಆ ಕಾರಣ ಏನು ಅಂದ್ರೆ, ಅಧಿಕಾರಿಗಳು, ಕಲ್ಲು ಕ್ವಾರಿ ಮಾಲೀಕರು, ಸ್ಫೋಟಕ ಸಾಗಾಟಗಾರರ ನಡುವೆ ಒಂದು ನಂಟಿದೆ. ಈ ನಂಟಿನಿಂದಾಗಿಯೇ ಈ ಅಕ್ರಮ ಗಣಿಗಾರಿಕೆ ಹೆಚ್ಚಾಗುತ್ತಿವೆ ಎಂದು ತಜ್ಞರು ಹೇಳುತ್ತಿದ್ದಾರೆ. ಗಣಿ ಭೂ ವಿಜ್ಞಾನ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇರುವ ಕಾರಣ ಈ ಅಕ್ರಮ ಗಣಿಗಾರಿಕೆಗೆ ಲಾಭವಾಗಿದೆ. ಸಿಬ್ಬಂದಿ ಕೊರತೆ ಹಿನ್ನೆಲೆ ಇರುವ ಕಲ್ಲು ಕ್ವಾರಿ, ಗಣಿಗಾರಿಕೆ ಪ್ರದೇಶಗಳಿಗೆ ನಿರಂತರ ತಪಾಸಣೆ ನಡೆಸಲು ಸಾಧ್ಯವಾಗುತ್ತಿಲ್ಲ. ತಪ್ಪಿತಸ್ಥರಿಂದ ಒಂದಷ್ಟು ದಂಡ ವಸೂಲಿ ಬಿಟ್ಟರೆ ಬೇರೆ ಕಾನೂನು ಕ್ರಮ ತೆಗೆದುಕೊಳ್ಳಲು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಪ್ರಬಲ ಕಾನೂನಿನ ಅಸ್ತ್ರ ಇಲ್ಲ ಹಾಗಾಗಿ ಈ ಅಕ್ರಮ ಕಲ್ಲು ಕ್ವಾರಿಗೆ ತಡೆಯನ್ನು ಹಾಕಲಾಗುತ್ತಿಲ್ಲ.

ಅಕ್ರಮ ಕಲ್ಲು ಕ್ವಾರಿಗೆ ಸಂಬಂಧ ಪಟ್ಟಂತೆ 2017 ▯ 18 ರಲ್ಲಿ 114 ಮೊಕದ್ದಮೆಗಳನ್ನು ದಾಖಲಿಸಲಾಗಿತ್ತು. 6.13 ಕೋಟಿ ರೂ. ದಂಡವನ್ನು ವಸೂಲಿ ಮಾಡಲಾಗಿತ್ತು. 2018–19ರಲ್ಲಿ 413 ಅಕ್ರಮ ಕಲ್ಲು ಗಣಿಗಾರಿಕೆ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿತ್ತು. ಈ ಸಂಬಂಧ 108 ಮೊಕದ್ದಮೆಗಳನ್ನು ದಾಖಲಿಸಲಾಗಿತ್ತು. ಒಟ್ಟು 12.13 ಕೋಟಿ ರೂ. ದಂಡ ವಸೂಲಿ ಮಾಡಲಾಗಿತ್ತು. ಇನ್ನು 2019–20ರಲ್ಲಿ 266 ಅಕ್ರಮ ಕಲ್ಲು ಗಣಿಗಾರಿಕೆಯನ್ನು ಪತ್ತೆ ಹಚ್ಚಲಾಗಿತ್ತು. ಈ ಸಂಬಂಧ 117 ಮೊಕದ್ದಮೆಗಳನ್ನು ದಾಖಲಿಸಲಾಗಿತ್ತು. 9.08 ಕೋಟಿ ರೂ. ದಂಡ ವಸೂಲಿ ಮಾಡಲಾಗಿತ್ತು. ಜೊತೆಗೆ ರಾಜಕಾರಣಿಗಳ ಪ್ರಭಾವ ಬಳಸಿ ಅಕ್ರಮವಾಗಿ ಕಲ್ಲು ಗಣಿಗಾರಿಕೆ ನಡೆಸುತ್ತಿರುವುದು ಸಾಮಾನ್ಯವಾಗಿದೆ. ಹೀಗಾಗಿ ಅಕ್ರಮ ಕಲ್ಲು ಗಣಿಗಾರಿಕೆಗೆ ಅಂಕುಶ ಹಾಕುವವರು ಯಾರು ಎಂಬ ಪ್ರಶ್ನೆಗೆ ಸರಕಾರವೇ ಉತ್ತರ ನೀಡಬೇಕಿದೆ.

ಇನ್ನೂ ಕಲ್ಲುಕ್ವಾರಿಗೆ ಬಳಸುವ ಜಿಲೆಟಿನ್ ಸ್ಟಿಕ್ ಸಾಗಾಟ, ಬಳಕೆ ಹೇಗೆ? ಎಂಬುದರ ಬಗ್ಗೆ ತಿಳೀತಾ ಹೋಗೋಣ, ಕಲ್ಲು ಕ್ವಾರಿಯಲ್ಲಿ ಸ್ಫೋಟಕ್ಕಾಗಿ ಜಿಲೆಟಿನ್ ಸ್ಟಿಕ್ಗಳನ್ನು ಬಳಸಲಾಗುತ್ತದೆ. ಈ ಜಿಲೆಟಿನ್ ಬಳಕೆ ಮತ್ತು ಸಾಗಾಟಕ್ಕೆ ಪರವಾನಗಿ ಪಡೆಯುವುದು ಅಗತ್ಯವಾಗಿದೆ. ಖನಿಜ ಮತ್ತು ಗಣಿಗಾರಿಕೆ (ಸ್ಫೋಟಕ) ನಿಯಂತ್ರಣ ಕಾಯ್ದೆ 2012 ರಡಿ ನಿರ್ವಹಣಾ ಪರವಾನಗಿ ಪಡೆಯಬೇಕು. ಪರವಾನಗಿ ಒಂದು ವರ್ಷದ ಅವಧಿಗೆ ಮಾತ್ರ ಸೀಮಿತವಾಗಿರುತ್ತದೆ. ಪ್ರತಿ ವರ್ಷ ಪರವಾನಗಿ ನವೀಕರಣ ಮಾಡಬೇಕಾಗುತ್ತದೆ. ಸ್ಫೋಟಕಗಳ ಖರೀದಿ, ಸಂಗ್ರಹ ಮತ್ತು ಸಾಗಣಿಕೆಗೆ ಪ್ರತ್ಯೇಕವಾಗಿ ಪರವಾನಗಿ ಪಡೆಯಬೇಕು. ಈ ಎಲ್ಲದಕ್ಕೂ ಪರವಾನಗಿ ಪಡೆದಿದ್ದರೆ ಮಾತ್ರ ಸ್ಫೋಟಕಗಳನ್ನು ನಿರ್ವಹಣೆ ಮಾಡಬಹುದಾಗಿದೆ. ಕಲ್ಲು ಗಣಿಗಾರಿಕೆಯ ಪರವಾನಗಿಯನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ನಿರ್ದೇಶಕರು, ಜಂಟಿ ನಿರ್ದೇಶಕರು, ಹಿರಿಯ ಭೂ ವಿಜ್ಞಾನಿಗಳು ಮಾತ್ರ ನೀಡಬಹುದಾಗಿದೆ. ಇವರ ಅನುಮತಿಯನ್ನು ಪಡೆಯದೆ ನಡೆಯುವ ಕಲ್ಲು ಕ್ವಾರಿಗಳು ಕಾನೂನು ಬಾಹಿರವಾಗಿರುತ್ತವೆ.

ರಾಜ್ಯದಲ್ಲಿ ಸಂಭವಿಸಿದ ಕಲ್ಲು ಕ್ವಾರಿ ಅವಘಡಗಳ ಕಡೆ ಒಂದಿಷ್ಟು ಕಣ್ಣನ್ನು ಹಾಯಿಸೋಣ, ಶಿವಮೊಗ್ಗದಲ್ಲಿ ಜ. 21ರಂದು ನಡೆದ ಡೈನಮೈಟ್ ಸ್ಫೋಟ ರಾಜ್ಯದಲ್ಲಿ ಸಂಭವಿಸಿದ ಅತಿ ದೊಡ್ಡ ಕಲ್ಲು ಕ್ವಾರಿ ಅವಘಡವಾಗಿದೆ. ಸುಮಾರು 7 ಮಂದಿ ಸಾವನಪ್ಪಿದ್ದು, ಸ್ಫೋಟದ ವ್ಯಾಪ್ತಿ ಸುತ್ತಮುತ್ತಲಿನ ಹಳ್ಳಿ, ಜಿಲ್ಲೆಗಳನ್ನೂ ಆವರಿಸಿತ್ತು. ಇದಾದ ಬಳಿಕ ಈಗ ಚಿಕ್ಕಬಳ್ಳಾಪುರದಲ್ಲಿ ನಡೆದ ಜಿಲೆಟಿನ್ ಸ್ಫೋಟ ಮತ್ತೊಂದು ಅತಿ ದೊಡ್ಡ ಕ್ವಾರಿ ಅವಘಡವಾಗಿದೆ. ಈ ಅವಘಡದಲ್ಲಿ ಈವರೆಗೆ ಒಟ್ಟು 6 ಮಂದಿ ಸಾವನ್ನಪ್ಪಿದ್ದಾರೆ. ಉಳಿದಂತೆ ಕಳೆದ ಕೆಲ ವರ್ಷಗಳಿಂದ ರಾಜ್ಯದ ವಿವಿಧೆಡೆ ಕಲ್ಲು ಕ್ವಾರಿ ಅವಘಡಗಳು ನಡೆದಿರುವ ಪ್ರಕರಣಗಳು ವರದಿಯಾಗಿವೆ. ಆದರೆ, ಸಣ್ಣ ಪುಟ್ಟ ಗಾಯಗಳಾಗಿರುವುದು ವರದಿಯಾಗಿದ್ದು ಬಿಟ್ಟರೆ ಇಷ್ಟು ದೊಡ್ಡ ಪ್ರಮಾಣದಲ್ಲಿ ಅವಘಡ ಸಂಭವಿಸಿರಲಿಲ್ಲ.

ರಾಜ್ಯದಲ್ಲಿ ಪ್ರಸ್ತುತ ಗುತ್ತಿಗೆ ಆಧಾರದ ಮೇಲೆ 2802 ಕಲ್ಲು ಗಣಿಗಾರಿಕೆಗಳು ಕಾರ್ಯ ನಿರ್ವಹಿಸುತ್ತಿವೆ. ರಾಜ್ಯ ಸರ್ಕಾರಕ್ಕೆ 1500 ಕೋಟಿ ರೂ. ವಾರ್ಷಿಕ ಆದಾಯ ಬರುತ್ತಿದೆ. 1 ಟನ್ ಕಲ್ಲಿಗೆ 650 ರೂ.ನಿಂದ 700 ರೂ.ವರೆಗೆ ದರ ನಿಗದಿ ಮಾಡಲಾಗಿದೆ. ಕಿ.ಮೀ ಆಧಾರದ ಮೇಲೆ ಸಾಗಾಣಿಕ ವೆಚ್ಚವನ್ನು ತೆಗೆದುಕೊಳ್ಳಲಾಗುತ್ತಿದೆ. 60 ರೂ. ರಾಜಧನ, 30 ರೂ. ಜಿಲ್ಲಾ ನಿರ್ವಹಣೆ ನಿಧಿ ಮತ್ತು ಇನ್ನಿತರ ಸೇರಿ ಪ್ರತಿ ಟನ್ ಕಲ್ಲಿಗೆ ಒಟ್ಟು 107 ರೂ. ಶುಲ್ಕವನ್ನು ಸರ್ಕಾರಕ್ಕೆ ಕಟ್ಟಲಾಗುತ್ತಿದೆ. ವಾರ್ಷಿಕ ಸಾವಿರಾರು ಮಿಲಿಯನ್ ಮೆಟ್ರಿಕ್ ಟನ್ ಕಲ್ಲು ತೆಗೆಯಲಾಗುತ್ತಿದೆ.

ಈ ಕಲ್ಲು ಕ್ವಾರಿಯಿಂದ ಏನೆಲ್ಲ ಹಾನಿಯಾಗುತ್ತೆ, ಪರಿಸರದ ಮೇಲೆ, ಮನುಷ್ಯನ ಮೇಲೆ ಅದು ಹೇಗೆ ಪರಿಣಾಮ ಬೀರುತ್ತೆ ಅನ್ನೋದನ್ನಾ ತಿಳಿತಾ ಹೋಗೋಣ?: ಪರಿಸರಕ್ಕೆ ಹಾನಿ ಉಂಟುಮಾಡುವ ಅಧಿಕೃತ ಮತ್ತು ಅನಧಿಕೃತ ಕಲ್ಲು ಗಣಿಕಾರಿಕೆಯನ್ನು ಸಂಪೂರ್ಣವಾಗಿ ರದ್ದು ಮಾಡಬೇಕೆಂದು ಪರಿಸರವಾದಿಗಳು, ರೈತರು ಸೇರಿ ನಾನಾ ಸಂಘಟನೆಗಳು ಈಗಾಗಲೇ ಸಾಕಷ್ಟು ಬಾರಿ ಹೋರಾಟ ನಡೆಸಿದ್ದರೂ ಸರ್ಕಾರ ಸುರಕ್ಷತಾ ಕ್ರಮಕೈಗೊಂಡಿಲ್ಲ.

ಜಲ್ಲಿ, ಸೈಜುಗಲ್ಲು, ಬೋಲ್ಡರ್ಸ್, ದಿಂಡುಗಲ್ಲು, ಕಲ್ಲುಪುಡಿ, ಅಲಂಕಾರಿಕ ಶಿಲೆ ಮತ್ತು ಗ್ರಾನೈಟ್ ಗಣಿಗಾರಿಕೆಯಿಂದಾಗಿ ಪರಿಸರಕ್ಕೆ ಅಪಾರ ಹಾನಿಯಾಗುತ್ತದೆ. ಕ್ವಾರಿಗಳಿಂದ ಬರುವ ಧೂಳು ಹಾಗೂ ಸ್ಫೋಟಕ ವಸ್ತು ಬಳಕೆಯಿಂದ ಸ್ಥಳೀಯರಿಗೆ ತೊಂದರೆಯಾಗುತ್ತದೆ. ಆದ್ದರಿಂದ ರಾಜ್ಯದಲ್ಲಿ ಗಣಿಗಾರಿಕೆಯನ್ನು ಸಂಪೂರ್ಣ ನಿಲ್ಲಿಸಬೇಕೆಂಬುದು ಪರಿಸರವಾದಿಗಳ ಆಗ್ರಹವಾಗಿದೆ.

ಅಕ್ರಮ ಕಲ್ಲು ಗಣಿಗಾರಿಕೆಗೆ ಸ್ಥಳೀಯ ರಾಜಕಾರಣಿಗಳ ಕೃಪಾಕಟಾಕ್ಷವಿದೆ ಎಂಬ ಆರೋಪಗಳಿವೆ. ಚುನಾವಣೆ ಸಂದರ್ಭದಲ್ಲಿ ಸೋಲು–ಗೆಲುವಿನ ಲೆಕ್ಕಾಚಾರದಲ್ಲಿ ಗಣಿ ಮಾಲೀಕರ ಪಾತ್ರ ಪ್ರಮುಖವಾಗಿರುತ್ತದೆ. ಹೀಗಾಗಿ ಗಣಿಗಾರಿಕೆಗೆ ಅನುಮತಿ ಕೊಡಿಸುವುದರಲ್ಲಿ ಹಾಗೂ ಅಕ್ರಮ ಗಣಿಗಾರಿಕೆ ನಡೆಸುವುದರಲ್ಲಿ ಸ್ಥಳೀಯ ಮುಖಂಡರ ಕೈವಾಡವಿರುತ್ತದೆ ಎಂಬ ಆರೋಪಗಳು ಕೂಡಾ ಕೇಳಿ ಬರುತ್ತಿವೆ. ದುರ್ಘಟನೆ ನಡೆದಾಗ ಟ್ವೀಟ್, ಫೇಸ್ಬುಕ್, ಮೂಲಕ ಸರಕಾರ ಮತ್ತು ಅಧಿಕಾರಿಗಳು ಸಂತಾಪ ಸೂಚಿಸಿ, ಕ್ರಮವನ್ನು ಕೈಗೊಳ್ಳುವುದಾಗಿ ಹೇಳಿ ಸುಮ್ಮನಾಗುತ್ತಾರೆ. ದುರ್ಘಟನೆಯಲ್ಲಿ ಸಾವೀಗೀಡಾದ ಕುಟುಂಬಗಳಿಗೂ ಸರಿಯಾದ ಪರಿಹಾರವನ್ನು ಇನ್ನೂ ನೀಡುತ್ತಿಲ್ಲ. ಆ ಪರಿಹಾರವನ್ನು ಪಡೆಯುವುದಕ್ಕೆ ಕುಟುಂಬಗಳು ಇಲಾಖೆಯಿಂದ ಇಲಾಖೆಗೆ ಓಡಾಡುವ ಪರಿಸ್ಥಿತಿ ಇದೆ. ಎಲ್ಲದಕ್ಕಿಂತ ಮುಖ್ಯವಾಗಿ ಇಂತಹ ದುರ್ಘಟನೆಗಳು ನಡೆಯದಂತೆ ಸರಕಾರ ಎಚ್ಚರಿಕೆ ವಹಿಸಬೇಕಿದೆ. ಅಕ್ರಮ ಕಲ್ಲುಗಣಿಗಾರಿಕೆಗೆ ಬ್ರೆಕ್ ಹಾಕಲು ಮುಂದಾಗಬೇಕಿದೆ.

ಇನ್ನೂ ಬೆಳಗಾವಿಯಲ್ಲಿ ಕ್ವಾರಿಗಳಿಗೆ ಅನುಮತಿ ಒಂದು ಕಡೆ ಇದ್ದರೆ ಕಲ್ಲು ಗಣಿಗಾರಿಕೆ ಕಲ್ಲು ತೆಗೆಯುವಿಕೆ ಒಂದು ಕಡೆ ಇರುತ್ತದೆ ಇವರುಗಳ ಜೊತೆ ಜೆಲಿಸ್ಟಗಳು ಸಾತ್ ನೀಡುತ್ತಾ ಇದ್ದಾರೆಂದು ಸಾರ್ವಜನಿಕರು ಅಕ್ರೋಶ ವ್ಯಕ್ತಪಡಿಸಿದ್ದಾರೆ.

ಇನ್ನೂ ನೆಲ ಸಮಾನತೆ ಮಾಡುವ ನಪಹೆಳಿ ಸುಮಾರು 50 ಅಡಿ 40 ಅಡಿ ಅಗೆದು ಮಣ್ಣು ಮಾರಾಟ ಮಾಡುವ ಕೆಲವರಿಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳು ಬೆಳಗಾವಿಯಲ್ಲಿ ಸಾತ್ ನೀಡುತ್ತಿದ್ದಾರೆ.

ಎಂಬ ಆರೋಪಗಳು ಕೆಲ ಹಳ್ಳಿಗಳಲ್ಲಿ ಕೇಳಿ ಸಾರ್ವಜನಿಕರಿಂದ ಕೇಳಿ ಬರುತ್ತಿದೆ ಮಣ್ಣುಗಳ ಲೋಡ್ ಮಾಡಿಕೊಂಡು ಹೋಗುವ ಟಿಪ್ಪರ್ಗಳಿಗೆ ಯಾವುದೇ ಅನುಮತಿ ಇಲ್ಲದೆ ಬೇಕಾಬಿಟ್ಟಿ ರಸ್ತೆ ಮೇಲೆ ಮಣ್ಣು ಕಲ್ಲುಗಳನ್ನು ಚಲ್ಲಾಡುತ್ತಾ ಹೋಗುವುದರಿಂದ ಕೆಲ ಹಾನಿಗಳು ಆಗುತ್ತಿವೆ ಗಣಿಗಾರಿಕೆ ಇಲಾಖೆಯವರು ಇಂತಹ ಅಕ್ರಮ ಗಣಿಗಾರಿಕೆ ಮಣ್ಣು ಆಗಿವಿಕೆ ಮಾಡಿ ಲಾರಿಗಳ ಲೋಡ್ ಮಾಡಿಕೊಂಡು ಮನ್ನು ಹಾಗೂ ಕಲ್ಲುಗಳನ್ನು ರಸ್ತೆಗೆ ಚೆಲ್ಲಿ ಹೋಗುತ್ತಿರುವುದರಿಂದ ರಸ್ತೆಯ ಮೇಲೆ ಹಾದಾಡುವ ಸಾರ್ವಜನಿಕರಿಗೆ ಅಪಘಾತಕ್ಕೆ ಕಾರಣವಾಗುತ್ತಿದೆ ಎಂದು ಕೂಡ ಕೆಲ ಹಳ್ಳಿಗಳಿಗೆ ನಾವು ಭೇಟಿ ನೀಡಿದಾಗ ಸಾರ್ವಜನಿಕರು ಆಕ್ರೋಶ ಹೊರಗೆ ಹಾಕಿದರು

ಏನೇ ಆಗಲಿ ಗಣಿ ಮತ್ತು ಭೂವಿಜ್ಞಾನಿ ಅಧಿಕಾರಿಗಳ ನಿರ್ಲಕ್ಷದಿಂದ ಕೆಲ ಅಕ್ರಮ ಮಣ್ಣು ಕಲ್ಲು ಗಣಿಗಾರಿಕೆಗಳ ದಂಧೆಗಳು ಬೆಳಗಾವಿಯಲ್ಲಿ ನಡೆದಿದ್ದಂತು ಸತ್ಯ ಇದಕ್ಕೆ ಕಡಿವಾಣ ಹಾಕುತ್ತಾರೋ ಇಲ್ಲ ಅವರುಗಳಿಗೆ ಸಾತ್ ನೀಡುತ್ತಾರೋ ಎಂದು ಕಾದು ನೋಡಬೇಕಿದೆ.

## ಐ.ಟಿ.ಐ ಪ್ರವೇಶಗಳಿಗಾಗಿ ಅರ್ಜಿ ಅಹ್ವಾನ

ಬೆಳಗಾವಿ: ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ (ಪು) (Govt. I. T. I. Men) ಅಗಸ್ಟ–2023 ನೇ ಸಾಲಿನ ಆನ್ ಲೈನ್ ಪ್ರವೇಶಾತಿಗಾಗಿ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಆಸಕ್ತರು ಮೇ. 24 2023 ರಿಂದ ಜೂ. 7 2023 ರೊಳಗಾಗಿ ಇಲಾಖೆಯ ವೆಬ್ ಸೈಟ್ www.cite.karnataka.gov.in ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಪ್ರವೇಶಗಳು ಒಜಡಿುಣ ಅಣಟ ಖಿಥಣಜಡಿ ಪದ್ಧತಿಯಂತೆ ಆನ್ ಲೈನ್ ಮೇಲೆ ಬೆಂಗಳೂರಿನಿಂದ ಆಯ್ಕೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿ ಜಿಲ್ಲೆಯಲ್ಲಿರುವ ಸರ್ಕಾರಿ 15 (ಪು), ಬೆಳಗಾವಿ (ಮ), ಖಾನಾಪೂರ, ಕಿತ್ತೂರ, ನೇಸರಗಿ, ಸವದತ್ತಿ, ರಾಮದುರ್ಗ, ಗೋಕಾಕ, ರಾಯಬಾಗ, ಅಥ–ಣಿ, ಚಿಕ್ಕೋಡಿ, ನಿಪ್ಪಾಣಿ, ಅಕ್ಕೋಳ ಮತ್ತು ಯಮಕನಮರಡಿ/ ಅನುದಾನಿತ 08 (ಬೆಳಗಾವಿ(04), ಬೈಲಹೊಂಗಲ, ನಿಪ್ಪಾಣಿ, ಚಿಕ್ಕೋಡಿ ಮತ್ತು ಉಗಾರಖುರ್ದ) ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಬೇಟಿ ನೀಡಬಹುದು ಅಥವಾ 9740666950, 9448907736, 9844037805, 9972459404 ಮತ್ತು 8073729825 ಮೊ. ಸಂಖ್ಯೆಗಳಿಗೆ ಸಂಪರ್ಕಿಸಬಹುದು ಎಂದು ಉದ್ಯಮಬಾಗ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ (ಪುರುಷರು) ಪ್ರಾಚಾರ್ಯರಾದ (ದರ್ಜೆ–1) ರಾಜಶೇಖರ ಎಸ್. ಚಿಕ್ಕಮಠ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೀನುಗಾರರಿಗೆ ಸಹಾಯಧನ: ಅರ್ಜಿ ಅಹ್ವಾನ

ಬೆಳಗಾವಿ: ಮೀನುಗಾರಿಕೆ ಇಲಾಖೆಯಿಂದ 2023–24ನೇ ಸಾಲಿಗೆ ರಾಜ್ಯವಲಯ ಯೋಜನೆಗಳಡಿ ಸಹಾಯಧನಕ್ಕಾಗಿ ಮಿನುಗಾರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ರಾಜ್ಯವಲಯ, ಜಿಲ್ಲಾವಲಯ ಯೋಜನೆಗಳು ಜಲಾಶಯ, ನದಿಭಾಗ ಹಾಗೂ ಕೆರೆಗಳ ವ್ಯಾಪ್ತಿಯ ವೃತ್ತಿಪರ ಮೀನುಗಾ–ರಿಕೆ ಮೀನುಹಿಡಿಯುವ ಬಲೆ ಅಥವಾ ಫೈಬರ ಹರಿಗೋಲು ಖರೀದಿಗೆ ಸಹಾಯಧನ, ಮೀನುಮರಿ ಖರೀದಿಸಲು, ಕೆರೆ, ಜಲಾಶಯಗಳ ಅಂಚಿನ ಕೂಳಗಳಲ್ಲಿ ಮೀನುಮರಿ ಪಾಲನೆಗೆ ಹಾಗೂ ಕೆರೆಯನ್ನು ಗುತ್ತಿಗೆಗೆ ಪಡೆದ ಮೀನುಗಾರಿಕೆ ಸಹಕಾರ ಸಂಘ, ಮೀನುಗಾರರಿಗೆ ಮೀನುಮರಿ ಬಿತ್ತನೆಗೆ ಸಹಾಯಧನ ನೆರವು ನೀಡಲಾಗುವುದು.

ಅರ್ಹ ಫಲಾನುಭವಿಗಳು ಆನ್‌ಲೈನ್‌ನ ಸೇವಾಸಿಂದು ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ, ಹೆಚ್ಚಿನ ಮಾಹಿತಿಗಾಗಿ ಅಯಾ ತಾಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ, ಮಾಹಿತಿ ಪಡೆಯಬಹುದು ಎಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಟಣೆಯಲ್ಲಿ ತಿಳಿಸಿದ್ದಾರೆ.

## ಡಾ. ಮೈತ್ರೇಯಿಣಿ ಗದಿಗೇಪ್ಪಗೌಡರ ಸಹಾಯಕ ಪ್ರಾಧ್ಯಾಪಕ ಹುದ್ದೆಯಿಂದ ಬಿಡುಗಡೆ

ಬೆಳಗಾವಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ. ಮೈತ್ರೇಯಿಣಿ ಗದಿಗೇಪ್ಪಗೌಡರ ಅವರನ್ನು ಸಪ್ಟೆಂಬರ್.16 2021 ರಂದು ಉಚ್ಚನ್ಯಾಯಾಲಯದ ತೀರ್ಪಿನ ಅನ್ವಯ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಹುದ್ದೆಯಿಂದ ಬಿಡುಗಡೆ ಮಾಡಲಾಗಿದೆ.

ಸದರಿಯವರುಗೂ ಹಾಗೂ ವಿಶ್ವವಿದ್ಯಾಲಯಕ್ಕೂ ಯಾವುದೇ ಸಂಬಂಧವಿರುವುದಿಲ್ಲ ಎಂದು ಕುಲಸಚಿವರಾದ ರಾಜಶ್ರೀ ಜೈನಾಪೂರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಐ.ಟಿ.ಐ ಮಹಿಳಾ ಪ್ರವೇಶಗಳಿಗಾಗಿ ಅರ್ಜಿ ಅಹ್ವಾನ

ಬೆಳಗಾವಿ: 2023ನೇ ಸಾಲಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಮಹಿಳಾ ಆನ್‌ಲೈನ್ ಪ್ರವೇಶಗಳಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಇಲಾಖೆಯ ವೆಬ್‌ಸೈಟ್ **www.cite.karnataka.gov.in** ನ ಮೂಲಕ ಜೂ. 7 2023 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಉದ್ಯಮಬಾಗ ಸರಕಾರಿ ಐ.ಟಿ.ಐ ಮಹಿಳಾ ಕೈಗಾರಿಕಾ ತರಬೇತಿ ಸಂಸ್ಥೆಗೆ ಬೇಟಿ ನಿಡಬಹುದು ಅಥವಾ ದೂರವಾಣಿ 8073066375, 9342787227 ಗೆ ಸಂಪರ್ಕಿಸಬಹುದು ಎಂದು ಉದ್ಯಮಬಾಗ ಸರ್ಕಾರಿ ಮಹಿಳಾ ಕೈಗಾರಿಕಾ ತರಬೇತಿ ಸಂಸ್ಥೆ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 36 ಅಡಿ ಎತ್ತರದ ರೇಣುಕಾಚಾರ್ಯ ಮೂರ್ತಿ ನಿರ್ಮಾಣ ಕಾರ್ಯದ ಚಾಲನಾ ಸಮಾರಂಭ

ಕಡೇನಂದಿಹಳ್ಳಿ (ಶಿಕಾರಿಪುರ ತಾಲೂಕ): ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 9–6–2023 ಶುಕ್ರವಾರದಂದು ತಪೋಕ್ಷೇತ್ರ ಕಡೇನಂದಿಹಳ್ಳಿ ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮದಲ್ಲಿ ಬೃಹಸ್ಪತಿ ಹೋಮ, ಶಿವಾನುಷ್ಠಾನ ಮಂದಿರ ಶಿಲಾಮಂಟಪದ ಮೇಲೆ 36 ಅಡಿ ಎತ್ತರದ ಶ್ರೀ ಜಗದ್ಗುರು ರೇಣುಕಾಚಾರ್ಯ ಮೂರ್ತಿ ನಿರ್ಮಾಣ ಕಾರ್ಯ ಚಾಲನಾ ಸಮಾರಂಭವನ್ನು ಏರ್ಪಡಿಸಲಾಗಿದೆ.

ಪ್ರಾತ:ಕಾಲದಲ್ಲಿ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರುಗಳವರು ಇಷ್ಟಲಿಂಗ ಪೂಜೆ ನಡೆಸುವರು.

ಮಾಜಿ ಮುಖ್ಯ ಮಂತ್ರಿ ಬಿ.ಎಸ್.ಯಡಿಯೂರಪ್ಪನವರು ಧರ್ಮ ಸಮಾರಂಭ ಉದ್ಘಾಟಿಸಿ ಮೂರ್ತಿ ನಿರ್ಮಾಣಕ್ಕೆ ಚಾಲನೆ ನೀಡುವರು.

ಸಂಸದ ಬಿ.ವೈ.ರಾಘವೇಂದ್ರ, ಶಾಸಕರಾದ ಬಿ.ವೈ.ವಿ–ಜಯೇಂದ್ರ, ಯು.ಬಿ.ಬಣಕಾರ ಇವರಿಗೆ ಗೌರವ ಗುರುರಕ್ಷೆ ನೀಡಲಾಗುವುದು.

ಮುಖ್ಯ ಅತಿಥಿಗಳಾಗಿ ಮಲೆನಾಡು ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಕೆ.ಎಸ್. ಗುರುಮೂರ್ತಿ ಹಾಗೂ ಜಿಲ್ಲಾ ಪಂಚಾಯತ್ ಗ್ರಾಮ ಪಂಚಾಯತ ಅಧ್ಯಕ್ಷರು, ಸದಸ್ಯರುಗಳು ಹಾಗೂ ರಾಜಕೀಯ ಧುರೀಣರು ಪಾಲ್ಗೊಳ್ಳುವರು.

ದುಗ್ಲಿ–ಕಡೇನಂದಿಹಳ್ಳಿ ಕ್ಷೇತ್ರದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಲಿದ್ದು, ಕನ್ನೂರು–ಸಿಂಧನೂರು ಗುರುಮಠದ ಸೋಮನಾಥ ಶಿವಾಚಾರ್ಯ ಸ್ವಾಮಿಗಳು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯ ಸ್ವಾಮಿಗಳು, ಚನ್ನಗಿರಿಯ ಕೇದಾರ ಶಿವಶಾಂತವೀರ ಶಿವಾಚಾರ್ಯ ಸ್ವಾಮಿಗಳು, ಸಿಗಂಧೂರು ಕ್ಷೇತ್ರದ ಧರ್ಮದರ್ಶಿ ಡಾ.ರಾಮಪ್ಪ, ನೀಲಗೋಡು ಯಕ್ಷಿ ಚೌಡೇಶ್ವರಿ ಕ್ಷೇತ್ರದ ಧರ್ಮದರ್ಶಿ ಮಾದೇವ ಸ್ವಾಮಿ, ಹಾರನಹಳ್ಳಿ ಶ್ರೀ ಶನೈಶ್ಚರಸ್ವಾಮಿ ಕ್ಷೇತ್ರದ ಧರ್ಮದರ್ಶಿ ಹನುಮಂತಪ್ಪ ಸ್ವಾಮಿಗಳು ಉಪಸ್ಥಿತರಿರುವರು.

ಶ್ರೀ ಗುರು ರೇವಣಸಿದ್ಧೇಶ್ವರ ಜನಕಲ್ಯಾಣ ಟ್ರಸ್ಟ್ ಸಲಹಾ ಮತ್ತು ಸೇವಾ ಸಮಿತಿ, ಶ್ರೀ ಗುರು ರೇವಣಸಿದ್ಧೇಶ್ವರ ಯುವಕ ಮಂಡಳಿ ಪದಾಧಿಕಾರಿಗಳು, ಕಡೇನಂದಿಹಳ್ಳಿ–ದುಗ್ಲಿ ಮತ್ತು ಸುತ್ತಲಿನ ಗ್ರಾಮಗಳ ಸದ್ಭಕ್ತರುಗಳು ಸಮಾರಂಭಕ್ಕೆ ಸಹಕಾರ ನೀಡಲಿರುವರು. ಶ್ರೀ ಮಠದ ಪುರೋಹಿತ ಬಳಗದಿವರಿಂದ ವೈದಿಕ ಸೇವೆ ನಡೆಯಲಿದೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಶ್ರೀ ಮಠದ ಪ್ರಕಟಣೆ ತಿಳಿಸಿದೆ.

# ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ಸಭೆ

ಬೆಂಗಳೂರು : ಚುನಾವಣೆಗೆ ಮುನ್ನ ಘೋಷಿಸಿರುವ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ವಿವಿಧ ಇಲಾಖೆಗಳ ಅಧಿಕಾರಿಗಳ ಜೊತೆ ಸಭೆ ನಡೆಸಿದರು.

ಗೃಹಜ್ಯೋತಿ, ಗೃಹ ಲಕ್ಷ್ಮಿ, ಅನ್ನಭಾಗ್ಯ, ಯುವ ನಿಧಿ ಹಾಗೂ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ನೀಡುವ ಯೋಜನೆಗಳನ್ನು ಚುನಾವಣೆಗೆ ಮುನ್ನ ಘೋಷಿಸಲಾಗಿತ್ತು.

ಈ ಕುರಿತು ಹಣಕಾಸು, ಸಾರಿಗೆ, ಆಹಾರ ಮತ್ತು ನಾಗರಿಕ ಸರಬರಾಜು, ಇಂಧನ ಮತ್ತಿತರ ಇಲಾಖೆಗಳ ಹಿರಿಯ ಅಧಿಕಾರಿಗಳ ಜೊತೆ ಸಮಾಲೋಚನೆ ನಡೆಸಿದ ಮುಖ್ಯಮಂತ್ರಿಯವರು ಯೋಜನೆಗಳನ್ನು ಜಾರಿಗೊಳಿಸುವ



ವಿಚಾರದಲ್ಲಿ ವರದಿಯೊಂದನ್ನು ಸಿದ್ಧಪಡಿಸುವಂತೆ ತಿಳಿಸಿದರು.

ಗ್ಯಾರಂಟಿ ಯೋಜನೆಗಳನ್ನು ಜಾ–ರಿಗೊಳಿಸುವ ಬಗ್ಗೆ ಮುಖ್ಯಮಂತ್ರಿಯವರು ಬುಧವಾರ ಎಲ್ಲ ಸಚಿವರೊಂದಿಗೆ ಸಮಾಲೋಚನೆ ನಡೆಸಲಿದ್ದಾರೆ.

ಬಳಿಕ ಗುರುವಾರ ನಡೆಯುವ ಸಂಪುಟ ಸಭೆಯಲ್ಲಿ ಈ ಕುರಿತು ಅಧಿಕೃತ ತೀರ್ಮಾನ ಕೈಗೊಳ್ಳಲಾಗುವುದು.

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮಾ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಯೋಜನೆಗಳನ್ನು ಯಾವ ರೀತಿ ಜಾರಿಗೊಳಿಸಬಹುದು ಎಂಬ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ ವಿವರಿಸಿದರು.

## ಕಾನೂನು ಬಾಹೀರ ಕಾರ್ಯಗಳಲ್ಲಿ ನಿರತರಾದ ಬಾಲ ಕಾರ್ಮಿಕರ ರಕ್ಷಣಾ ಕಾರ್ಯಾಚರಣೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಎಲ್ಲಮ್ಮನ ಗುಡ್ಡದ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನ ಆವರಣದಲ್ಲಿ ಮೇ.26 2023 ರಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ನೇತೃತ್ವದಲ್ಲಿ ಹಾಗೂ ಸಹಭಾಗೀದಾರರ ಇಲಾಖೆಗಳಾದ ತಹಶೀಲ್ದಾರ್ ಕಚೇರಿ, ಪೊಲೀಸ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಕಾರ್ಮಿಕ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ಸಹಾಯವಾಣಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಹಯೋಗದೊಂದಿಗೆ ಭಿಕ್ಷಾಟನೆಯಲ್ಲಿ ನಿರತವಾಗಿರುವ ಬಾಲಕಾರ್ಮಿಕ ಹಾಗೂ ಇತರ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ 18 ವರ್ಷದೊಳಗಿನ ಮಕ್ಕಳ ರಕ್ಷಣಾ ಕಾರ್ಯಚರಣೆ ಮಾಡಲಾಯಿತು.

ದೇವಸ್ಥಾನದ ಆವರಣದಲ್ಲಿರುವ ಹೋಟೆಲಗಳು, ಹೂಹಣ್ಣು, ಕಾಯಿ, ಕರ್ಪೂರ ಅಂಗಡಿಗಳ ಮೇಲೆ ಕ್ಷಿಪ್ರ ದಾಳಿ ಮಾಡಿ ಬಾಲ ಕಾರ್ಮಿಕರ ರಕ್ಷಣೆ ಕಾರ್ಯಚರಣೆ ಮಾಡಲಾಯಿತು ಅದರಂತೆ ದೇವಸ್ಥಾನದ ಚಾವನೆಯಲ್ಲಿ ಸುಮಾರು 13 ರಿಂದ 18 ವರ್ಷದೊಳಗಿನ ಮಕ್ಕಳು ಭಕ್ತರಿಂದ ದೇವರ ಹೆಸರಿನಲ್ಲಿ ಸೀರೆ, ಕಾಯಿ, ಕರ್ಪೂರ ಪಡೆದು ಮಾರಾಟ ಮಾಡುತ್ತಿರುವ ಮಕ್ಕಳನ್ನು ಸಹ ರಕ್ಷಣೆ ಮಾಡಲಾಯಿತು.

ಇಂತಹ ಬಾಲಕಾರ್ಮಿಕ ಭಿಕ್ಷಾಟನೆಯಲ್ಲಿ ನಿರತವಾಗಿರುವ ಸುಮಾರು 50 ಜನ ಮಕ್ಕಳನ್ನು ಕಾರ್ಯಾಚರಣೆ ಮಾಡಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರಪಡಿಸಲಾಯಿತು.

ಸವದತ್ತಿ ಬಾಲಕಿಯ ಬಾಲ ಮಂದಿರ ದಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ವಿಶೇಷ ಸಭೆಯನ್ನು ಏರ್ಪಡಿಸಿ RTI ಕಾಯ್ದೆ, ಮಕ್ಕಳ ಪಾಲನೆ ಸಂರಕ್ಷಣೆ ಕುರಿತು ಬಾಲ ನ್ಯಾಯ ಕಾಯ್ದೆ –2015 ರನ್ವಯ, ಭಿಕ್ಷಾಟನೆ ನಿರ್ಮೂಲ ಕಾಯಿದೆ ಬಗ್ಗೆ ತಿಳುವಳಿಕೆ ನೀಡಿ ಇಂತಹ ಯಾವುದೇ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿಸದಂತೆ ಸೂಚನೆಯನ್ನು ನೀಡಿ, ಬಿಡುಗಡೆ ಮಾಡಲಾಯಿತು.

ಬೆಳಗಾವಿ ಜಿಲ್ಲಾ ಮಕ್ಕಳ ಸಂರಕ್ಷಣಾಧಿಕಾರಿಗಳಾದ ಮಹಾಂತೇಶ್ ಭಜಂತಿ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ಮೌಲಾಸಾಬ್ ಮದನಸಿ ಹಾಗೂ ಎಲ್ಲಮ್ಮನ ದೇವಸ್ಥಾನದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಮಹೇಶ್ ಹಾಗೂ ಅರವಿಂದ್ ಮಾಳಗಿ, ಸಿ.ಪಿ.ಐ ಕರುನೇಶ ಗೌಡಾ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳಾದ ರಾಜು ಮಾದರ, ಫಕ್ರುದಿನ್ ತಹಶೀಲ್ದಾರ್, ಮಹೇಶ್ ಸಂಗಾನಟ್ಟಿ, ಜೆಟಿ ಲೋಕೇಶ್ವರಪ್ಪ, ಸಚಿನ್ ಹಿರೇಮಠ, ಶ್ರೀದೇವಿ ಗುಳ್ ಹಾಗೂ ಮಕ್ಕಳ ಸಹಾಯವಾಣಿ ಸಿಬ್ಬಂದಿಗಳಾದ ಎಂ,ಕೆ ಕುಂದರಗಿ, ಶಿವಲೀಲಾ ಹಿರೇಮಠ್, ನಿಂಗಪ್ಪ ಸಮಾಜ ಕಲ್ಯಾಣ ಇಲಾಖೆ, ಕಾರ್ಮಿಕ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ ಆರೋಗ್ಯ ಇಲಾಖೆ ಪೋಲಿಸ್ ಇಲಾಖೆ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.


## ಬಿಎಸ್‌ಸಿ ದಿ ಟೆಕ್ಸ್‌ಟೈಲ್ ಮಾಲ್‌ನಿಂದ ಸಿಬ್ಬಂದಿಗಳಿಗೆ ಹೆಲ್ಮೆಟ್ ವಿತರಣೆ

ಬೆಳಗಾವಿ : ಬೆಳಗಾವಿಯ ಗೋವೇವ್ಸ್‌ನಲ್ಲಿರುವ ಬಿಎಸ್ಸಿ ಟೆಕ್ಸ್ಟೈಲ್ ಮಾಲ್ ನೌಕರರಿಗೆ ಸಂಚಾರ ನಿಯಮಗಳ ಬಗ್ಗೆ ಮಾರ್ಗದರ್ಶನ ನೀಡಿತು ಮತ್ತು ಅವರ ಬೈಕ್ ನಲ್ಲಿ ಸುರಕ್ಷತವಾಗಿ ಸಂಚರಿಸಲು ಹೆಲ್ಮೆಟ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಾಲ್ ನಿರ್ದೇಶಕ ಬಿ. ಎಸ್. ಚಂದ್ರಶೇಖರ್ ವಾಹನ ಚಲಾಯಿಸುವಾಗ ಪ್ರತಿಯೊಬ್ಬರೂ ಕಡ್ಡಾಯವಾಗಿ ಸಂಚಾರಿ ನಿಯಮಗಳನ್ನು ಪಾಲಿಸಬೇಕು. ಅದೇ ರೀತಿ ಜೀವ ಉಳಿಸಲು ಹೆಲ್ಮೆಟ್ ಬಳಸಬೇಕು.

ಈ ನಿಟ್ಟಿನಲ್ಲಿ ಬಿಎಸ್ಸಿ ದಿ ಟೆಕ್ಸ್ಟೈಲ್ ಮಾಲ್ನ ನಿರ್ದೇಶಕರು ಪ್ರತಿಯೊಬ್ಬರು ದ್ವಿಚಕ್ರ ವಾಹನ ಚಾಲನೆ ಮಾಡುವಾಗ ಹೆಲ್ಮೆಟ್ ದರಿಸ ಬೇಕು ಎಂದು ಮನವಿ ಮಾಡಿದರು–

ಬಳಿಕ ಮಾಲ್ನ ನಿರ್ದೇಶಕ ಬಿ.




ಎಸ್. ಬಿಎಸ್ಸಿಯ ದಾವಣಗೆರೆ ಮಾಲ್ನ ಉದ್ಯೋಗಿಯೊಬ್ಬರು ಅಪಘಾತದಲ್ಲಿ ಪ್ರಾಣ ಕಳೆದುಕೊಂಡಿದ್ದಾರೆ ಎಂದು ಹೇಳಿದರು. ವಾಹನ ಚಲಾಯಿಸುವಾಗ ಹೆಲ್ಮೆಟ್ ಧರಿಸದೇ ಇದ್ದುದರಿಂದಲೇ ಮೃತಪಟ್ಟಿರುವುದು ಪೊಲೀಸರ ತನಿಖೆಯಿಂದ ತಿಳಿದುಬಂದಿದೆ. ಹೀಗಾಗಿ ನೌಕರರಲ್ಲಿ ಹೆಲ್ಮೆಟ್ ಬಳಕೆ ಕುರಿತು ಜಾಗೃತಿ ಮೂಡಿಸಲು ಈ ಚಟುವಟಿಕೆ ನಡೆಸುತ್ತಿದ್ದೇವೆ.

ವಾಹನ ಚಲಾಯಿಸುವಾಗ ಪ್ರಾಣಿ, ಮನುಷ್ಯ ಅಥವಾ ಇತರೆ ವಾಹನಗಳು ಅಡ್ಡ ಬಂದರೆ ಅಪಘಾತವಾಗುವ ಸಂಭವವಿರುತ್ತದೆ.

ಮಳೆಗಾಲದಲ್ಲಿ ನೀರು, ಕೆಸರಿನಿಂದ ವಾಹನಗಳು ಜಾರಿ ಬೀಳುತ್ತವೆ.

ಇಂತಹ ಸಂದರ್ಭದಲ್ಲಿ ಹೆಲ್ಮೆಟ್ ಇಲ್ಲದೇ ಇದ್ದರೆ ಗಾಯವಾಗುವ ಸಂಭವವಿದೆ. ಆದ್ದರಿಂದ ವಾಹನ ಚಲಾಯಿಸುವಾಗ ಪ್ರತಿಯೊಬ್ಬರು ಹೆಲ್ಮೆಟ್ ಧರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಳಿಗೆಯ ವ್ಯವಸ್ಥಾಪಕ ಅಮ್ಜದ್ ಜಮಾದಾರ, ಮಾರುಕಟ್ಟೆ ವ್ಯವಸ್ಥಾಪಕ ಈರಣ್ಣ ಶಿವಶೆಟ್ಟಿ, ಬಿಎಸ್ಸಿ ಎ ಟೆಕ್ಸ್ಟೈಲ್ ಮಾಲ್ ನಿರ್ದೇಶಕರು, ಸಿಬ್ಬಂದಿ ಉಪಸ್ಥಿತರಿದ್ದರು.

## ಮಾದಿಗ ಸಮಾಜದ ವಧು ವರರ ಸಮಾವೇಶ 2023



ಬೆಳಗಾವಿ : ಡಾಕ್ಟರ್ ಬಿ ಆರ್ ಅಂಬೇಡ್ಕರ್ ಗ್ರಾಮೀಣ ಅಭಿವೃದ್ಧಿ ಹಾಗೂ ಪರಿಶಿಷ್ಟ ಜಾತಿ ವಧು–ವರರ ಅನ್ವೇಷನ ಸೇವಾ ಸಂಸ್ಥೆ ಅವರ ವತಿಯಿಂದ ದಿನಾಂಕ 28 5.2023 ರವಿವಾರದಂದು ಬೆಳಗಾವಿ ನಗರಿಯ ಚೆನ್ನಮ್ಮ ವೃತ್ತದ ಬಳಿ ಸಾಹಿತ್ಯ ಭವನದಲ್ಲಿ ಮಾದಿಗ ಸಮಾಜದವರ ವಧು–ವರರ ಸಮಾವೇಶವನ್ನು ಹಮ್ಮಿಕೊಂಡಿದ್ದರು.

ಪ್ರತಿ ವರ್ಷದಂತೆ ನು ಈ ವರ್ಷನು ಅಂದರೆ ನಾಲ್ಕನೇ ವರ್ಷ ಮಾದಿಗ ಸಮಾಜದ ಅಧ್ಯಕ್ಷತೆಯನ್ನು ಸವಿತಾ ಎಲ್ಲಪ್ಪ ಗುಡದಳ್ಳಿ. ಯಲ್ಲಪ್ಪ ರಾಮ್ ಗುಡ್ಡಳ್ಳಿ. ಬಸವರಾಜ್ ಅರವಳ್ಳಿ. ಲಕ್ಷ್ಮಣ್ ಲಗಮಪ್ಪ ಗೋಳ. ಎಲ್ಲಪ್ಪ ಹುದುವಳ್ಳಿ. ಸುಜಾತ ಹೂಬ್ಬುಲಕರ. ಹಾಗೂ ಸುತ್ತು ಮತ್ತು ಹಳ್ಳಿಗಳಿಂದ ಹಾಗೂ ತಾಲೂಕಿನಿಂದ ವಧು ವರಗಳು ಬಂದಿದ್ದರು.

## ಎಲ್ಲಿ ನಿಜಭಕ್ತಿ ಇರುವುದೋ ಅಲ್ಲಿ ದೇವರಿರುವನು: ವೈಜಿನಾಥ ಮಹಾರಾಜರು

ಭಾಲ್ಕಿ: ಪೂಜ್ಯ ಶ್ರೀ ದಿವ್ಯಯೋಗಿ ಶ್ರೀ ಕಂಠಯ್ಯಾ ಸ್ವಾಮಿಗಳ 49ನೆಯ ಮಾಸಿಕ ಶಿವಾನುಭವ ಗೋಷ್ಠಿ ಕಾರ್ಯಕ್ರಮವು ಉಚ್ಚ ಗ್ರಾಮದ ಪೂಜ್ಯ ಶ್ರೀ ಕಂಠಯ್ಯ ಸ್ವಾಮಿಗಳ ಲಿಂಗಯೋಗ ಧ್ಯಾನ ಮಂದಿರದಲ್ಲಿ ಜರುಗಿ–ತು. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪೂಜ್ಯ ಶ್ರೀ ವೈಜಿನಾಥ ಮಹಾರಾಜರು ವಹಿಸಿದ್ದರು.

ಬಳಿಕ ಮಾತನಾಡಿದ ಅವರು ಭಕ್ತಿಯ ಕುರಿತು ಅನುಭಾವ ಹೇಳಿದರು.

ಎಲ್ಲಿ ನಿಜ ಭಕ್ತಿ ಇರುವುದೋ ಅಲ್ಲಿ ದೇವರಿರುವನು ಡಾಂಭಿಕ ಭಕ್ತಿ ಸಲ್ಲದು, ಹಿತವಾದ ಭಕ್ತಿ ಶಿವನಿಗೆ ಪ್ರಿಯವಾದುದು. ಎಂದರು. ಕಾರ್ಯಕ್ರಮದ



ಅಧ್ಯಕ್ಷತೆಯನ್ನು ಪೂಜ್ಯರ ಅಪ್ಪಟ ಶಿಷ್ಯೆ ಅನಿತಾ ಜಾಣೆ ಅವರು ವಹಿಸಿದ್ದರು.

ಬಸವ ಗುರು ಪೂಜೆಯನ್ನು ಶ್ರೀಮತಿ ಸುಧಾರಾಣಿ ಸಿದ್ದಲಿಂಗ ಮಠಪತಿ ಅವರು ನೆರವೇ–ರಿಸಿದ್ದರು.

ದೀಪ ಬೆಳಗುವುದರ ಮೂಲಕ ಕಾರ್ಯಕ್ರಮಕ್ಕೇ ಚಾಲನೆ ನೀಡಿದರು. ವಚನ ಗಾಯನವನ್ನು ಶ್ರೀಮತಿ ಶ್ರೀದೇವಿ ಶಾಂತಯ್ಯ ಸ್ವಾಮಿ ನಡೆಸಿಕೊಟ್ಟರು.

ಇದೇ ಸಂದರ್ಭದಲ್ಲಿ ಶ್ರೀಮತಿ ನಾಗಮ್ಮ ವೈಜಿನಾಥ ಮಠಪತಿ, ಶ್ರೀಮತಿ ಗೌರಮ್ಮ, ಶ್ರೀ ವೀರಯ್ಯ ಸ್ವಾಮಿ, ಶ್ರೀಮತಿ ನಾಗಮ್ಮ ಶಿವಯ್ಯ ಸ್ವಾಮಿ ಅವರನ್ನು ಶಾಲು ಹೊದೆಸಿ ಗೌರವಿಸಿ ಸನ್ಮಾನಿಸಲಾಯಿತು. ಅದೇ ರೀತಿ ಶಿವಗೀತಾ ವಿರೂಪಾಕ್ಷಪ್ಪ ಅವರನ್ನು ಶಾಲು ಹೊದೆಸಿ ಗೌರವಿಸಲಾಯಿತು.

ಕವನ ಶಾಂತಯ್ಯ ಸ್ವಾಮಿ ಅವರು ವಚನ ಪಠಣ ಮಾಡಿದರು. ಸುನೀತಾ ಹಾಗೂ ಶ್ರೀದೇವಿ ಸ್ವಾಮಿ ಭಕ್ತಿಗೀತೆ ಹಾಡಿದರು. ಶ್ರೀಮತಿ ಅನಿತಾ ಜಾಣೆ ಪ್ರಾಥ–ರ್ನೆ ಗೀತೆ ಹಾಡಿದರು.

ಶಾಂತಯ್ಯ ಸ್ವಾಮಿ ನಿರೂಪಿಸಿದರು. ಚಂದನ ಸ್ವಾಮಿ ಸ್ವಾಗತಿಸಿದರು.

ಶಿವಯೋಗಿ ಸ್ವಾಮಿ ವಂದಿಸಿದರು. ಭಜನೆ ಪ್ರಾಥ–ರ್ನೆಯೊಂದಿಗೆ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

ಮಂಗಲ ಹಾಗೂ ಪ್ರಸಾದ ದೊಂದಿಗೆ ಕಾರ್ಯಕ್ರಮ ಯಶಸ್ವಿಯಾಗಿ ಮುಕ್ತಾಯವಾಯಿತು.

# ಕುಸ್ತಿಪಟುಗಳ ತಿರುಚಿದ ಫೋಟೋ: ಹೀಗೆ ಮಾಡಲು ನಾಚಿಕೆ ಆಗಲ್ವಾ; ಸಾಕ್ಷಿ ಮಲ್ಲಿಕ್, ಉರ್ಫಿ ಜಾವೆದ್ ಕಿಡಿ

ನವದೆಹಲಿ: ಭಾರತೀಯ ಕುಸ್ತಿ ಅಸೋಸಿಯೇಷನ್ ಮುಖ್ಯಸ್ಥ ಬ್ರಿಜ್ ಭೂಷಣ್ ಶರಣ್ ಸಿಂಗ್ ವಿರುದ್ಧ ಕುಸ್ತಿಪಟುಗಳು ರಾಷ್ಟ್ರ ರಾಜಧಾನಿಯಲ್ಲಿ ನಡೆಸುತ್ತಿರುವ ಪ್ರತಿಭಟನೆ ದಿನದಿಂದ ದಿನಕ್ಕೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ. ನಿನ್ನೆ ದಿನ ಪ್ರತಿಟನೆ ನಡೆಸುತ್ತಿದ್ದ ಕುಸ್ತಿಪಟುಗಳನ್ನು ಬಂಧಿಸಿ, ಎಫ್ ಐಆರ್ ಕೂಡಾ ದಾಖಲಾಗಿದೆ.

ಇದೇ ವೇಳೆ ಕುಸ್ತಿಪಟುಗಳಾದ ವಿನೇಶ್ ಫೋಗಟ್ ಮತ್ತು ಸಂಗೀತಾ ಫೋಗಟ್ ಪೊಲೀಸ್ ವಾಹನದಲ್ಲಿ ನಗುತ್ತಿರುವ ಫೋಟೋವೊಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿ–ತ್ತು. ಈ ಕುರಿತು ಕಿಡಿಕಾರಿರುವ ಸಾಕ್ಷಿ ಮಲ್ಲಿಕ್, ಹೀಗೆ ಮಾಡಲು




ನಾಚಿಕೆ ಆಗ್ವಲ್ಲಾ,ದೇವರು ಹೇಗೆ ಇಂತಹ ಜನರನ್ನು ಸೃಷ್ಟಿಸಿದ ಪ್ರಶ್ನಿಸಿದ ಅವರು, ವಿಚಲಿತರಾದ ಯುವತಿಯರ ಮುಖಕ್ಕೆ ನಗುತ್ತಿರುವ ಫೋಟೋವನ್ನು ಅಂಟಿಸಲಾಗಿದೆ. ಅವರಿಗೆ ಹೃದಯನೇ ಇಲ್ಲ ಅನಿಸುತ್ತದೆ. ನಮ್ಮ ಅಪಖ್ಯಾತಿಗೆ ಅವರು ಪ್ರಯತ್ನಿಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ನಿನ್ನೆಯ ಪರಿಸ್ಥಿತಿ ಹದಗೆಟ್ಟಿತ್ತು. ಶಾಂತಿಯುತವಾಗಿ ಮೆರವಣಿಗೆ ಮಾಡಲು ಬಯಸಿದ್ದೆವು ಆದ–ರೆ ಹಾಗೆ ಮಾಡಲು ನಮ್ಮನ್ನು ಬಿಡಲಿಲ್ಲ. ಜಂತರ್ ಮಂತ–ರ್ನಿಂದ ಬಲಕ್ಕೆ ಬ್ಯಾರಿಕೇಡ್ ಇತ್ತು. ನಮ್ಮನ್ನು ಹಿಂದಕ್ಕೆ ತಳ್ಳಲು ಪ್ರಾರಂಭಿಸಿದ ಪೊಲೀಸರು ಬಂಧಿಸಿದರು.

ನಂತರ ಬಸ್ ಗಳಿಗೆ ಎಳೆದೊಯ್ದರು. ನಾವು ಯಾವುದೇ ಹಿಂಸಾಚಾರ ಮಾಡಿಲ್ಲ, ಯಾವುದೇ ಸಾರ್ವಜನಿಕ ಆಸ್ತಿಗೆ ಹಾನಿ ಮಾಡಿಲ್ಲ ಎಂದು ಅವರು ಹೇಳಿದರು.

ದೆಹಲಿ ಪೊಲೀಸರು ಭಾನುವಾರ ಒಲಿಂಪಿಕ್ ಪದಕ ವಿಜೇತರಾದ ಬಜರಂಗ್ ಪುನಿಯಾ ಮತ್ತು ಸಾಕ್ಷಿ ಮಲಿಕ್ ಸೇರಿದಂತೆ ಭಾರತದ ಅಗ್ರ ಕುಸ್ತಿಪಟುಗಳು ಸೇರಿದಂತೆ 700 ಕ್ಕೂ ಹೆಚ್ಚು ಪ್ರತಿಭಟನಾಕಾರರನ್ನು ಬಂಧಿಸಿದ್ದಾರೆ. ಮತ್ತೊಂದೆಡೆ ಕುಸ್ತಿಪಟುಗಳ ತಿರುಚಿದ ಫೋಟೋಕ್ಕೆ ಬಾಲಿವುಡ್ ನಟಿ ಉರ್ಫಿ ಜಾವೇದ್ ಕೂಡಾ ಕಿಡಿಕಾರಿದ್ದಾರೆ. ಜನರು ತಮ್ಮ ಸುಳ್ಳುಗಳನ್ನು ಸಾಬೀತುಪಡಿಸಲು ಏಕೆ ಈ ರೀತಿಯ ಫೋಟೋ ಹಾಕುತ್ತಾರೋ ಎಂದು ವಾಗ್ದಾಳಿ ನಡೆಸಿದ್ದಾರೆ.

## ಜೈನ ಸಮಾಜದ ವಿದ್ಯಾರ್ಥಿಗಳಿಗೆ ಶಿಕ್ಷಣಕ್ಕಾಗಿ ಆರ್ಥಿಕ ನೆರವು


ಬೆಳಗಾವಿ: ಇತ್ತಿಚಿಗೆ ನಡೆದ 2023 ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದು ಉತ್ತೀರ್ಣರಾದ ಹಾಗೂ ಆರ್ಥಿಕವಾಗಿ ಹಿಂದುಳಿದ ಜೈನ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಮುಂದಿನ ಶಿಕ್ಷಣಕ್ಕಾಗಿ ಜಿತೋ ಬೆಳಗಾವಿ ವಿಭಾಗದ ವತಿಯಿಂದ ಜೀತೊ ಶ್ಯಾಂಕಿ ಯೋಜನೆಯಡಿ ಆರ್ಥಿಕ ನೆರವು ನೀಡಲಾಗುವುದು.

ಈ ಯೋಜನೆ ಕಳೆದ 10 ವರ್ಷಗಳಿಂದ ನಿರಂತರವಾಗಿ ನಡೆಯುತ್ತ ಬಂದಿದ್ದು, ಈ ವರ್ಷವೂ ಸಹ ಈ ಯೋಜನೆಯನ್ನು ಮುಂದುವರೆಸಲಾಗಿದೆ.

ಈ ಯೋಜನೆ ಬೆಳಗಾವಿ ಜಿಲ್ಲೆಯ ವಿದ್ಯಾರ್ಥಿಗಳಿಗೆ ಮಾತ್ರ ಸಿಮೀತವಾಗಿರುತ್ತದೆ. ಹತ್ತನೇಯ ತರಗತಿ ಪಾಸಾದ ಹಾಗೂ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು ಜೂನ 5 ರೊಳಗೆ ಅರ್ಜಿಗಳನ್ನು ಸಲ್ಲಿಸಬೇಕು.

**https://forms.gle/H86XgdJYuVriZp29A** ಇಲ್ಲಿ ಆನ್‌ಲೈನ ಫಾರ್ಮ ತುಂಬಬೇಕು. ಹೆಚ್ಚಿನ ಮಾಹಿತಿಗಾಗಿ 9845016717 / 9035187432 ಇಲ್ಲಿ ಬೆಳಿಗ್ಗೆ 9 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಹಾವು ಕಚ್ಚಿ ಸಾವು



ಕಲಬುರಗಿ: ಜ ವಿ ು ೀ ನಿ ಗ ಹೋದಾಗ ಹಾವು ಕಚ್ಚಿ ಬಾಲಕಿ ಸಾವನ್ನಪ್ಪಿರುವ ದಾರುಣ ಘಟನೆ ಕಲಬುರಗಿ ಯಲ್ಲಿ ನಡೆದಿದೆ.

ಜಿಲ್ಲೆಯ ಆಳಂದ ತಾಲೂಕಿನ ಯಳಸಂಗಿ ಗ್ರಾಮದಲ್ಲಿ ಘಟನೆ ನಡೆದಿದೆ.

ಪೂಜಾ (16) ವಿಷ ಜಂತು ಕಡಿತಕ್ಕೆ ಪ್ರಾಣ ಕಳೆದುಕೊಂಡ ಬಾಲಕಿ.

ಪೂಜಾ ಗ್ರಾಮದಲ್ಲಿ ಕಟ್ಟಿಗೆ ತರಲೆಂದು ಹೊಲಕ್ಕೆ ತೆರಳಿದ್ದಾಗ ಹಾವು ಕಚ್ಚಿದೆ. ದುರ್ಘಟನೆಯಿಂದ ಪೂಜಾ ಸಾವನ್ನಪ್ಪಿದ್ದಾಳೆ.

## ಟಣಕನಕಲ್: ಶಿಶಿಕ್ಷು ತರಬೇತಿಗೆ ಮೇ 31ರಂದು ಕ್ಯಾಂಪಸ್ ಸಂದರ್ಶನ

ಕೊಪ್ಪಳ: ಶಿಶಿಕ್ಷು ತರಬೇತಿಗಾಗಿ ಕ್ಯಾಂಪಸ್ ಸಂದರ್ಶನವನ್ನು ಮೇ 31ರಂದು ಕುಷ್ಟಗಿ ರಸ್ತೆಯ ಟಣಕನಕಲ್ ಸರ್ಕಾರಿ ಕೈಗಾ–ರಿಕಾ ತರಬೇತಿ ಸಂಸ್ಥೆಯಲ್ಲಿ ಏರ್ಪಡಿಸಲಾಗಿರುತ್ತದೆ ಎಂದು ಕೊಪ್ಪಳ ಸರ್ಕಾರಿ ಐಟಿಐ ಪ್ರಾಚಾರ್ಯರು ತಿಳಿಸಿದ್ದಾರೆ.

ಕ್ಯಾಂಪಸ್ ಸಂದರ್ಶನದಲ್ಲಿ ಪ್ರತಿಷ್ಠಿತ ಕಂಪನಿಯಾದ ಮೆ. ಹೋಂಡಾ ಮೋರ್ಸ್ ಪ್ರೈಲಿ ನರಸಾಪೂರ ರವರು ಆಗಮಿಸಲಿದ್ದು, ಐಟಿಐ ಪಾಸಾದ ಹಾಗೂ ಪ್ರಸ್ತುತ ಎ ರಡನೇಯ ವರ್ಷದಲ್ಲಿ ತರಬೇತಿ ಪಡೆಯುತ್ತಿರುವ ಎಲ್ಲಾ ವೃತ್ತಿಗಳ ಅಭ್ಯರ್ಥಿಗಳಿಗೆ ಶಿಶಿಕ್ಷು ತರಬೇತಿ (ಅಪ್ರೆಂಟಿಸ್‌ಶಿಪ್) ಗಾಗಿ ಆಯ್ಕೆ ಮಾಡಿಕೊಳ್ಳಲಿದ್ದಾರೆ.

ಅದರಂತೆ ಮೇ 31ರ ಬೆಳಿಗ್ಗೆ 9ಕ್ಕೆ ಸಂದರ್ಶನ ನಡೆಯಲಿದ್ದು, ಆಸಕ್ತರು ತಮ್ಮ ಆಧಾರ್ ಕಾರ್ಡ, ಫೋಟೋ, ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲಾ ಮೂಲ ದಾಖಲಾತಿಗಳು ಹಾಗೂ 2 ಸೆಟ್ ಝೆರಾಕ್ಸ್ ಪ್ರತಿಗಳೊಂದಿಗೆ ಸಂದರ್ಶನದಲ್ಲಿ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಕೊಪ್ಪಳ (ಟಣಕನಕಲ್, ಕುಷ್ಟಗಿ ರಸ್ತೆ, ಕೊಪ್ಪಳ) ಹಾಗೂ ಮೊಬೈಲ್ ಸಂ: 9019233400, 9008536895, 9448813422, 9742532353, 9945577155, ಇವರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಜಾನುವಾರುಗಳ ಅಕ್ರಮ ಮಾಂಸ ಸಾಗಾಟ

ಬೆಳಗಾವಿ : ಜಾನುವಾರಗಳನ್ನು ಕತ್ತರಿಸಿ ಅಕ್ರಮವಾಗಿ ಮಾಂಸ ಸಾಗಿಸುತ್ತಿದ್ದ ವಾಹನವನ್ನು ಸಂಕೇಶ್ವರ ಪೊಲೀಸರು ವಶಕ್ಕೆ ಪಡೆದಿರುವ ಘಟನೆ ಜಿಲ್ಲೆಯ ಹುಕ್ಕೇರಿ ತಾಲೂಕಿನ ಹಿಟ್ನಿ ಕ್ರಾಸ್ ಬಳಿಯಲ್ಲಿ ಶನಿವಾರ ರಾತ್ರಿ ನಡೆದಿದ್ದು, ಇದು ಗೋಹತ್ಯೆಯ ಮಾಂಸವಾಗಿರುವ ಬಗ್ಗೆ ಶಂಕೆ ವ್ಯಕ್ತವಾಗಿದೆ.

ನಿಪ್ಪಾಣಿ ಕಡೆಯಿಂದ ಬೆಳಗಾವಿ ಕಡೆಗೆ ಹೊರಟ್ಟಿದ್ದ ಮಹೇಂದ್ರ ಬೋಲೇರೊ ಪಿಕಪ್ ಗುಡ್ಸ್ ವಾಹನ ಒಂದರಲ್ಲಿ ಸುಮಾರು ಒಂದು ಟನ್ ಕಿಂ–ತಲೂ ಹೆಚ್ಚು ಜಾನುವಾರಗಳ ಮಾಂಸ ಸಾಗಾಟ ಮಾಡಲಾಗುತ್ತಿತ್ತು.

ಈ ವೇಳೆ ಶನಿವಾರ ರಾತ್ರಿ 8 ಗಂಟೆ ಸುಮಾ–ರಿಗೆ ಜಿಲ್ಲೆಯ ಹುಕ್ಕೇರಿ ತಾಲೂಕಿನ ಹಿಟ್ನಿ ಕ್ರಾಸ್ ಬಳಿಯ ಪೂನಾ ಬೆಂಗಳೂರು ರಾಷ್ಟ್ರೀಯ ಹೆದ್ದಾರಿ 4ರಲ್ಲಿ ಮಾಂಸ ತುಂಬಿದ್ದ ವಾಹನ ಕೆಟ್ಟು ನಿಂತಾಗ ವಿಷಯ ತಿಳಿದ ಸಂಕೇಶ್ವರ ಪೊಲೀಸರು ಸ್ಥಳಕ್ಕೆ ಆಗಮಿಸಿ ಮಾಂಸ ತುಂಬಿದ್ದ ವಾಹನವನ್ನು ವಶಕ್ಕೆ



ಪಡೆದಿದ್ದಾರೆ ಎಂದು ತಿಳಿದು ಬಂದಿದೆ.

ಅಲ್ಲದೆ ಈ ವಾಹನದ ಚಾಲಕ ಫರಾರಿಯಾಗಿದ್ದಾನೆ ಎನ್ನಲಾಗಿದೆ.

ಬಳಿಕ ಈ ಮಾಂಸವನ್ನು ಪೊಲೀಸರು ತಪಾಸಣೆಗೆ ಒಳಪಡಿಸಲಾಗಿದ್ದು, ಬಳಿಕ ಮಾಂಸವನ್ನು ಮಣ್ಣಲ್ಲಿ ಹೂಳಲಾಗಿದೆ ಎಂದು ಹೇಳಲಾಗಿದೆ.

ಆದರೆ ಈ ವಾಹನದಲ್ಲಿ ಸಿಕ್ಕಿದ್ದು ಗೋವುಗಳ ಮಾಂಸ ಎಂದು ಶಂಕೆ ವ್ಯಕ್ತವಾಗಿದ್ದು, ಈ ಬಗ್ಗೆ ತನಿಖೆಯಿಂದ ತಿಳಿದು ಬರಬೇಕಿದೆ. ಜಾನುವಾರುಗಳ ಅಕ್ರಮ ಮಾಂಸ ಸಾಗಾಟ

# ಬಸವಣ್ಣವರ ವಿಚಾರ ಗಟ್ಟಿಯಾಗಿ ತಿಳಿದುಕೊಳ್ಳಿ: ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಸಚಿವರಾಗಿ ಬೆಳಗಾವಿ ಜಿಲ್ಲೆಗೆ ಪ್ರಪ್ರಥ–ಮ ಬಾರಿಗೆ ಆಗಮಿಸಿದ ಸಚಿವ ಸತೀಶ್ ಜಾರಕಿಹೊಳಿ ಅವರು ಜಿಲ್ಲೆಯ ಚನ್ನಮ್ಮ ಕಿತ್ತೂರು ತಾಲೂಕಿನ ಬೆಲೂರು ಮಠಕ್ಕೆ ಭೇಟಿ ನೀಡಿ, ಬೆಲೂರು ಮಠದ ನಿಜಗುಣಾನಂದ ಸ್ವಾಮೀಜಿ ಅವರನ್ನು ಸತ್ಕರಿಸಿ, ಸ್ವಾಮೀ–ಜಿಯವರ ಆಶೀರ್ವಾದ ಪಡೆದರು.

ನಂತರ ಬೆಲೂರು ಮಠದ ನಿಜಗುಣಾನಂದ ಸ್ವಾಮೀಜಿ ಅವ–ರಿಂದ ಸನ್ಮಾನ ಸ್ವೀಕರಿಸಿ ಸಭೆಯಲ್ಲಿ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ ಅವರು, ನಾನು ಸಚಿವನಾದ ಮೇಲೆ ಬೆಲೂರು ಮಠದ ನಿಜಗುಣಾನಂದ ಸ್ವಾಮೀಜಿ ಅವರ ಆರ್ಶೀವಾದ ಪಡೆಯಲು ಇಲ್ಲಿಗೆ ಬಂದಿದೇನೆ. ಸ್ವಾಮೀಜಿಯವರ ಮತ್ತು ನಮ್ಮ ಹೋರಾಟ ಒಂದೇ ಇದೆ. ಹೀಗಾಗಿ ಮುಂದಿನ ದಿನಗಳಲ್ಲಿ ಬಸವಣ್ಣವರ ವಿಚಾರಗಳನ್ನು ಮನೆ ಮನೆಗೆ ತಿಳಿಸಲಾಗುವುದು ಎಂದರು.

ಸಿಎಂ ಸಿದ್ದರಾಮಯ್ಯ ನೇತೃತ್ವದ ಈ ಹಿಂದಿನ ಕಾಂಗ್ರೆಸ್ ಸರ್ಕಾರದಲ್ಲಿ ಎಲ್ಲಾ ಸರ್ಕಾರಿ ಇಲಾಖೆಗಳಲ್ಲಿ ಬಸವಣ್ಣವರ ಫೋಟೋ ಇಡಲಾಗಿತ್ತು. ಕಿತ್ತೂರಿನ ಉತ್ಸವವನ್ನು ಅರ್ಥಪೂರ್ಣವಾಗಿ ಆಚರಿಸ ಲಾಯಿತು. ಮೂಂದೆಯೂ ಕಿತ್ತೂರು ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ವಿಶ್ವಗುರು ಬಸವಣ್ಣವರ ವಿಚಾರಗಳನ್ನು ಯಾರು ಗಟ್ಟಿಯಾಗಿ ತಿಳಿದುಕೊಳ್ಳುತ್ತಾರೆ ಅವರನ್ನು ಯಾವುದೇ ಶಕ್ತಿ, ಗಾಳಿ, ಧರ್ಮ, ಯಾವುದೇ ಸರ್ಕಾರ ಎನು ಮಾಡಕ್ಕೆ ಆಗಲ್ಲ. ಹೀಗಾಗಿ ಬಸವಣ್ಣವ ದಾರಿಯಲ್ಲಿ, ಬೆಲೂರು ಮಠದ ನಿಜಗುಣಾನಂದ ಸ್ವಾಮೀ–ಜಿಗಳ ಮಾರ್ಗದರ್ಶನದಲ್ಲಿ ಸಾಗಬೇಕೆಂದು ಸಲಹೆ ನೀಡಿದರು.

ಶಾಸಕ ಬಾಬಾ ಸಾಹೇಬ್ ಪಾಟೀಲ್ ಮಾತನಾಡಿ, ಸಚಿವ ಸತೀಶ್ ಜಾರಕಿಹೊಳಿಯವರು ಕಿತ್ತೂರು ಕ್ಷೇತ್ರದ ಅಭಿವೃದ್ಧಿ ಗೆ ಹೆಚ್ಚಿನ ಆಸಕ್ತಿ ವಹಿಸಲಿದ್ದು, ಅವರು ಸಚಿವರಾಗಿದ್ದರಿಂದ ನನಗೂ ಹೆಚ್ಚಿನ ಶಕ್ತಿ ಬಂದಿದೆ. ಕಾರಣ ಕಿತ್ತೂರು ಕ್ಷೇತ್ರದ ಸರ್ವ ಅಭಿವೃದ್ಧಿಗೆ ಹಗಲಿರಳು ಶ್ರಮಿಸುತ್ತೇನೆ ಎಂದು ತಿಳಿಸಿದರು.

ಬೆಲೂರು ಮಠದ ನಿಜಗುಣಾನಂದ ಸ್ವಾಮೀಜಿ ಮಾತನಾಡಿ, ನಾನು ಸತೀಶ್ ಜಾರಕಿಹೊಳಿ ಅವರೊಂದಿಗೆ ವೈಚಾರಿಕತೆ ಸಂಬಂಧ ಇಟ್ಟುಕೊಂಡಿದ್ದೇನೆ. ಹೊರತು ದುಡ್ಡಿನ ವ್ಯವಹಾರ ಇಟ್ಟುಕೊಂಡಿಲ್ಲ.

ವ್ಯವಹಾರ ಬೇರೆ, ವೈಚಾರಿಕತೆ ಬೇರೆ. ಅವರ ವಿಚಾರಗಳು, ನಮ್ಮ ವಿಚಾರಗಳು ಸಮಾನ ಮನಸ್ಕರ ಇರುವುದರಿಂದ ಸಚಿವರಾದ ಮೇಲೆ ಸತೀಶ್ ಜಾರಕಿಹೊಳಿ ಅವರು ಇಲ್ಲಿಗೆ ಆಗಮಿಸಿದ್ದಾರೆ ಎಂದರು.

ಸಮಾಜದಲ್ಲಿ ತಾರತಮ್ಯ, ಮೌಢ್ಯ, ಕಂದಾಚಾರ ಹೋಗಬೇಕಾದರೆ ಶಿಕ್ಷಣದ ಪ್ರಮಾಣ ನೂರಕ್ಕೆ ನೂರರಷ್ಟು ಆಗಬೇಕು. ಸಚಿವ ಸತೀಶ್ ಜಾರಕಿಹೊಳಿ ಅವರು ಕಿತ್ತೂರು ಭಾಗದಲ್ಲಿ ಒಂದು ಮಹಿಳಾ ಇಂಜಿನಿಯರ್ ಕಾಲೇಜು ಸ್ಥಾಪನೆಗೆ ಕ್ರಮ ಕೈಗೊಳ್ಳಬೇಕೆಂದು ಇದೇ ವೇಳೆ ಮನವಿ ಮಾಡಿದರು.

ಇದೇ ವೇಳೆ ಬೆಲೂರು ಮಠದ ನಿಜಗುಣಾನಂದ ಸ್ವಾಮೀಜಿ ಶಾಸಕರಾದ ಬಾಬಾ ಸಾಹೇಬ್ ಪಾಟೀಲ್, ವಿಶ್ವಾಸ ವೈದ್ಯ ಅವರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾಜಿ ಜಿಪಂ ಸದಸ್ಯ ರೋಹಿಣಿ ಪಾಟೀಲ್, ಕಾಂಗ್ರೆಸ್ ಮುಖಂಡ ಅಬೀಬ್ ಶಿಲ್ಲೇದಾರ್ ಸೇರಿದಂತೆ ಕಿತ್ತೂರು ಮತಕ್ಷೇತ್ರದ ಹಲವು ಮುಖಂಡರು ಇದ್ದರು.

## ಚನ್ನಮ್ಮ ನ ಕಿತ್ತೂರಿಗೆ ಆಗಮಿಸಿದ ನೂತನ ಸಚಿವ ಸತೀಶ್ ಜಾರಕಿಹೊಳಿಗೆ ಅದ್ದೂರಿ ಸ್ವಾಗತ



ಬೆಳಗಾವಿ: ಸಿದ್ದರಾಮಯ್ಯ ನೇತೃತ್ವದ ಸಂಪುಟ ದರ್ಜೆಯ ನೂತನ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿ ಭಾನುವಾರ ಚನ್ನಮ್ಮನ ಕಿತ್ತೂರಿಗೆ ಆಗಮಿಸಿದ ಸತೀಶ್ ಜಾರಕಿಹೊಳಿ ಅವರಿಗೆ ಅಭಿಮಾನಿ ಬಳಗ ಹಾಗೂ ಕಾಂಗ್ರೆಸ್ ಕಾರ್ಯಕರ್ತರಿಂದ ಅದ್ದೂರಿ ಸ್ವಾಗತ ಕೋರಿದರು.

ಐತಿಹಾಸಿಕ ಸ್ಥಳವಾದ ಚನ್ನಮ್ಮನ ಕಿತ್ತೂರಿಗೆ ಆಗಮಿದ ನೂತನ ಸಚಿವ ಸತೀಶ್ ಜಾರಕಿಹೊಳಿಗೆ ಕಾಂಗ್ರೆಸ್ ಕಾರ್ಯಕರ್ತರು ಜೆಸಿಬಿ ಮೂಲಕ ಪುಷ್ಪಾರ್ಚಣೆ ಮಾಡಿದರು. ನಂತರ ನೂತನ ಸಚಿವರು ವೀರ ರಾಣಿ ಕಿತ್ತೂರು ಚನ್ನಮಾಜಿಗೆ ಮಾಲಾರ್ಪಣೆ ಮಾಡಿದರು. ಅಲ್ಲೇ ಕೂಗಳೆತೆಯಲ್ಲಿರುವ ವೀರರಾದ ಸಂಗೊಳ್ಳಿ ರಾಯಣ್ಣ ಹಾಗೂ ಅಮಟೂರು ಬಾಳಪ್ಪ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.

ಸಚಿವರಾದ ನಂತರ ಮೊದಲ ಬಾರಿಗೆ ಕಿತ್ತೂರಿಗೆ ಆಗಮಿಸಿದಾಗ ಸತೀಶ್ ಜಾರಕಿಹೊಳಿ ಅವರಿಗೆ ಕಾಂಗ್ರೆಸ್ ಪಕ್ಷ ದ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಆಗಮಿಸಿ ಸಚಿವ ಸತೀಶ ಜಾರಕಿಹೊಳಿ ಅವರಿಗೆ ಹೂ ಮಾಲೆಗಳನ್ನು ಸಮರ್ಪಿಸಿ ಶುಭ ಕೋರಿದರು. ಈ ಸಮಯದಲ್ಲಿ ಅವರ ಅಪಾರ ಅಭಿಮಾನಿಗಳು ಜಯಘೋಷ ಹಾಕುವುದರ ಮೂಲಕ ಸಂಭ್ರಮಿಸಿದರು.

ಈ ವೇಳೆ ಶಾಸಕ ಬಾಬಾ ಸಾಹೇಬ್ ಪಾಟೀಲ, ರೋಹಿಣಿ ಪಾಟೀಲ್, ಸವದತ್ತಿ ಶಾಸಕ ವಿಶ್ವಾಸ್ ವೈದ್ಯ, ಕಾಂಗ್ರೆಸ್ ಮುಖಂಡ ಅಬೀಬ್ ಶಿಲ್ಲೆದಾರ್, ಶಂಕರ ಹೊಳಿ, ಪಪಂ ಸದಸ್ಯರಾದ ಸಂಕರ ಬಡಿಗೇರ, ಕಿಟ್ಟು ಬಾಳೆಕುಂದ್ರಿ ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಇದ್ದರು.

## ಅಪ್ರಾಪ್ತ ವಯಸ್ಸಿನ ಬಾಲಕಿಗೆ 20 ಬಾರಿ ಇರಿದು ಹತ್ಯೆ



ನವದೆಹಲಿ: ರಾಷ್ಟ್ರ ರಾಜಧಾನಿಯಲ್ಲಿ ಮತ್ತೊಂದು ಪೈಶಾಚಿಕ ಕೃತ್ಯ ನಡೆದಿದೆ. 16 ವರ್ಷದ ಅಪ್ರಾಪ್ತಗೆ 20 ಬಾರಿ ಚಾಕುವಿನಿಂದ ಇರಿದು ಹತ್ಯೆ ಮಾಡಲಾಗಿದೆ. ನವದೆಹಲಿಯ ಶಹಾಬಾದ್ ಡೈರಿ ಪ್ರದೇಶದಲ್ಲಿ ಭಾನುವಾರ ಆಕೆಯ ಬಾಯ್ ಫ್ರೆಂಡ್ ನಿಂದಲೇ ಈ ಘಟನೆ ನಡೆದಿದ್ದು, ಆರೋಪಿ ಸಾಹಿಲ್ ನನ್ನು ಉತ್ತರ ಪ್ರದೇಶದ ಬುಲಂದ್‌ಶಹರ್ ಬಳಿ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿ ಸಾಹಿಲ್ ಮತ್ತು ಮೃತ ಅಪ್ರಾಪ್ತೆ ನಡುವೆ ಸಂಬಂಧವಿತ್ತು ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ದಿನ ಇಬ್ಬರಿಗೂ ಜಗಳವಾಗಿದೆ. ನಂತರ ಆಕೆ ಬೀದಿಯಲ್ಲಿ ಹೋಗುತ್ತಿದ್ದಾಗ ಎದುರಾದ ಸಾಯಿಲ್ 20 ಬಾರಿ ಚಾಕುವಿನಿಂದ ಇರಿದು ಹತ್ಯೆ ಮಾಡಿದ್ದಾನೆ ಎಂದು ಉಪ ಪೊಲೀಸ್ ಆಯುಕ್ತ ರವಿಕುಮಾರ್ ಸಿಂಗ್ ತಿಳಿಸಿದ್ದಾರೆ.


## ಮೊಬಿಲ್‌ಟಿಎಂ ಹೃತಿಕ್ ರೋಷನ್ ಹೊಸಾ ಬ್ರ್ಯಾಂಡ್ ಅಂಬಾಸಿಡರ್ ನೇಮಕ

ಬೆಳಗಾವಿ : ಮೊಬಿಲ್‌ಟಿಎಂ ಬಾಲಿವುಡ್ ಸೂಪರ ಸ್ಟಾರ್ ಹೃತಿಕ ರೋಷನ್ ಅವರನ್ನು ತನ್ನ ಹೊಸಬ್ರಾಂಡ್ ಅಂಬಾಸಿಡರ್ ಆಗಿ ಘೋಷಿಸಿದೆ.

ಆತ್ಮವಿಶ್ವಾಸ ಮತ್ತು ಅಸಾಮಾನ್ಯ ಶಕ್ತಿಗೆ ಹೆಸರಾದ ಹೃತಿಕ್, ಮಾನವಪ್ರಗತಿಯನ್ನು ಹೆಚ್ಚಿಸುವ, ಆತ್ಮವಿಶ್ವಾಸ ಬೆಳೆಸುವ ಮತ್ತು ಗ್ರಾಹಕರು ತಮ್ಮನಿಜವಾದ ಸಾಮಥ–ರ್ಯವನ್ನು ಅನಾವರಣಗೊಳಿಸಲು ಅವಕಾಶಮಾಡಿಕೊಡುವ ಮೊಬಿಲ್‌ನ ಬ್ರಾಂಡ್ ಮೌಲ್ಯಗಳನ್ನು ಎತ್ತಿತೋರಿಸುವ ಸ್ಪಷ್ಟಆಯ್ಕೆಯಾಗಿ ಹೊರಹೊಮ್ಮಿದ್ದಾರೆ.

ಈ ಬಗ್ಗೆ ಪ್ರಕಟಿಸಿದ ಎಕ್ಸಾನ್‌ಬಿಲ್ ಲೂಬ್ರಿಕೆಂಟ್ಸ್ ಪ್ರೈವೆಟ್‌ಲಿ., ಸಿಇಓ ವಿಪಿನ್ರಾಣಾ, ಮೊಬಿಲ್ ಲೂಬ್ರಿಕಂಟ್‌ಗಳಿಗಾಗಿ ನಾವು ಹೃತಿಕ ರೋಷನ್ ಅವರೊಂದಿಗೆ ಪಾಲುದಾರರಾಗಲು ಉತ್ಸುಕರಾಗಿದ್ದೇವೆ.

ಭಾರತದ ಲೂಬ್ರಿಕೇಶನ್ ಅಗತ್ಯಗಳನ್ನು ಪೂರೈಸಲು ಮೊಬಿಲ್ ಏನನ್ನುಪೂರೈಸುತ್ತದೆ ಎನ್ನುವ ಕುರಿತು ವಿಶ್ವಾಸ ಹೊಂದಲು ಅವರ




ವ್ಯಕ್ತಿತ್ವವು ವ್ಯಾಪಾರ ಪಾಲುದಾರರು ಮತ್ತು ಗ್ರಾಹಕರೊಂದಿಗೆ ಚೆನ್ನಾಗಿ ಪ್ರತಿಫಲಿಸುತ್ತದೆ ಎಂದು ನಾವು ನಂಬಿದ್ದೇವೆ ಎಂದರು.

ಬ್ರ್ಯಂಡ್ ಸಹಭಾಗಿತ್ವ ಕುರಿತು ಪ್ರತಿಕ್ರಿಯಿಸಿದ ನಟ ಹೃತಿಕ್ರೋಷನ್, ಮೊಬಿಲ್ ಮತ್ತು ಅದರ ವಿಶ್ವಾಸಾರ್ಹ ಬ್ರ್ಯಂಡ್ಜೆಸರಿನೊಂದಿಗೆ ಪಾಲುದಾರಿಕೆಯನ್ನು ಹೊಂದಲು ಎದುರು ನೋಡುತ್ತಿದ್ದೇನೆ, ಅದು ಜಗತ್ತಿನಾದ್ಯಂತ ಗುರುತಿಸಲ್ಪಟ್ಟಿದೆ.

ಜನರ ಜೀವನ ಮತ್ತು ಸಮುದಾಯಕ್ಕೆ ವ್ಯತ್ಯಾಸವನ್ನು ಮಾಡಲು ಆತ್ಮವಿಶ್ವಾಸವು ಚಾಂಪಿಯನಗಳ ನಿಜವಾದ ಪ್ರೇರಕಶಕ್ತಿಯಾಗಿದೆ ಎಂದು ನಾನುಬಲವಾಗಿ ನಂಬುತ್ತೇನೆ ಎಂದರು.

ಗ್ರಾಹಕರು ತಮ್ಮಕಾರುಗಳು ಟ್ರಕಗಳು ಮತ್ತು ಮೋಟಾರ್ ಸೈಕಲ್ ಗಳಿಗೆ ಅತ್ಯುತ್ತಮ ಎಂಜಿನ್ ಕಾರ್ಯುಕ್ಷಮತೆ ಮತ್ತುರಕ್ಷಣೆ ಪಡೆಯಲು ಸಹಾಯ ಮಾಡಲು ಮೊಬಿಲ್ ಉತ್ಪನ್ನಗಳನ್ನು ವಿನ್ಯಾಸಗೊಳಿಸಲಾಗಿದೆ. ಉದ್ದಿಮೆಗಳಿಗಾಗಿ, ಮತ್ತುಪ್ರತೀ ಉದ್ಯಮದಲ್ಲಿ – ವೆಚ್ಚವನ್ನು ಕಡಿಮೆಮಾಡಲು, ಉತ್ಪಾದಕತೆಯನ್ನು ಸುಧಾರಿಸಲು ಮತ್ತು ಉಪಕರಣದ ದಕ್ಷತೆಯನ್ನು ಹೆಚ್ಚಿಸಲು ಮೊಬಿಲ್ ಪ್ರಪಂಚದಾದ್ಯಂತ ಗ್ರಾಹಕರಿಗೆ ಸಹಾಯಮಾಡಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈಲಿನ ರೇಕ್ ಹರಿದು ಕಾರ್ಮಿಕ ಸಾವು



ರಾಯಚೂರು: ಕಲ್ಲಿದ್ದಲು ಸಾಗಿಸುವ ರೈಲಿನ ರೇಕ್ ಹರಿದು ಗುತ್ತಿಗೆ ಕಾರ್ಮಿಕ ಸಾವನ್ನಪ್ಪಿದ ಘಟನೆ ರಾಯಚೂರಿನಲ್ಲಿ ನಡೆದಿದೆ.

ರಾಯಚೂರಿನ ಶಕ್ತಿನಗರದ ಆರ್‌ಟಿಪಿ–ಎಸ್ ವಿದ್ಯುತ್ ಕೇಂದ್ರದಲ್ಲಿ ಘಟನೆ ನಡೆದಿದ್ದು, ಗುತ್ತಿಗೆ ಕಾರ್ಮಿಕ ನಾಗರಾಜ್ (32) ರುಂಡ ಮುಂಡ ಬೇರ್ಪಟ್ಟು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ನಾಗರಾಜ್ ಕಲ್ಲಿದ್ದಲು ಸ್ಯಾಂಪಲ್ ತೆಗೆಯುವ ಕೆಲಸ ಮಾಡುತ್ತಿದ್ದು, ಕೆಲಸದ ವೇಳೆ ರೈಲಿಗೆ ಆಕಸ್ಮಿಕವಾಗಿ ಬಿದ್ದಿರುವ ಶಂಕೆ ವ್ಯಕ್ತವಾಗಿದೆ.

## ವಾಹನ ನಿರ್ವಹಣೆ, ತಾಂತ್ರಿಕ ಜ್ಞಾನ ತರಬೇತಿ



ಬೆಳಗಾವಿ: ಇಲ್ಲಿನ ಭಾರತ ವಾಹನ ತರಬೇತಿ ಶಾಲೆಯ ವತಿಯಿಂದ 'ವಾಹನ ನಿರ್ವಹಣೆ ಮತ್ತು ತಾಂತ್ರಿಕ ಜ್ಞಾನ' ತರಬೇತಿ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಭಾರತ್ ಡ್ರೈವಿಂಗ್ ಸ್ಕೂಲ್ ನ ಪ್ರಾಚಾರ್ಯ ಬಸವರಾಜ ಕಡ್ಲಿ ಮಾತನಾಡಿ, ವಾಹನ ಚಲಾಯಿಸುವಾಗ ಕೈಗೊಳ್ಳಬೇಕಾದ ಸುರಕ್ಷತಾ ಕ್ರಮಗಳು ಮತ್ತು ಅಪಘಾತ ರಹಿತವಾಗಿ ವಾಹನ ಚಲಾಯಿಸುವ ಕಲಿಕೆ ಅಗತ್ಯ ಕುರಿತು ಮಾಹಿತಿ ನೀಡಿದರಲ್ಲದೆ ಈ ಕಾರ್ಯಕ್ರಮವನ್ನು ಭಾರತ ವಾಹನ ತರಬೇತಿ ಶಾಲೆಯ ವತಿಯಿಂದ ಪ್ರತಿ ತಿಂಗಳ 2ನೇ ಶನಿವಾರ ನಡೆಸಿಕೊಡಲಾಗುತ್ತದೆ ಎಂದು ಅವರು ತಿಳಿಸಿದರು.

ಕರ್ನಾಟಕ ರಾಜ್ಯದ ವಾಹನ ತರಬೇತಿ ಶಾಲೆಯ ಒಕ್ಕೂಟದ ಅಧ್ಯಕ್ಷ ಆನಂದ್ ಪಾಟೀಲ್ ಮಾತನಾಡಿ, "ವಾಹನ ತರಬೇತಿ ಒಂದು ಕಲೆ. ಎಲ್ಲ ಕಾನೂನುಗಳನ್ನು ಪಾಲಿಸಿ ಸಂಪೂರ್ಣ ಸುರಕ್ಷಿತಾ ಕ್ರಮಗಳನ್ನು ಅನುಸರಿಸಿ ಅಪಘಾತ ರಹಿತವಾಗಿ ವಾಹನ ಚಲಾಯಿಸುವುದನ್ನು ಅಭ್ಯಸಿಸಬೇಕು" ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಯಾದಗಿರಿ ಜಿಲ್ಲೆಯ ಮೋಟಾರ್ ಡ್ರೈವಿಂಗ್ ಸ್ಕೂಲ್ ನ ಅಧ್ಯಕ್ಷ ಎಲ್ಲಪ್ಪ ಪಾಟೀಲ್ ಕಾರ್ಯದರ್ಶಿ ಜುಬೇರ್ ಅಹಮದ್, ಕಲಬುರಗಿ ಜಿಲ್ಲೆಯ ಡ್ರೈವಿಂಗ್ ಸ್ಕೂಲ್ ಅಸೋಸಿಯೇಷನ್ ಕಾರ್ಯದರ್ಶಿ ಇರ್ಫಾನ್ ಅಹ್ಮದ್ ಉಪಸ್ಥಿತರಿದ್ದರು.

ಡ್ರೈವಿಂಗ್ ಸ್ಕೂಲ್ ನಲ್ಲಿ ತರಬೇತಿ ಪಡೆಯುತ್ತಿರುವ ಬೆಳಗಾವಿಯ ಕಾರ್ಪೊರೇಟರ್ ವೀಣಾ ಬಿಜಾಪುರ ಮಾತನಾಡಿ, "ಇಲ್ಲಿ ಅತ್ಯಂತ ಉನ್ನತ ರೀತಿಯಲ್ಲಿ ನೀಡಲಾಗುತ್ತದೆ. ಸಿಬ್ಬಂದಿಗಳು ಸಹ ಸೌಹಾರ್ದಯುತವಾಗಿ, ಸ್ನೇಹ ಪರವಾಗಿ ನಡೆದುಕೊಳ್ಳುತ್ತಿರುವುದು ಉತ್ತಮ ಚಾಲನಾ ಕಲಿಕೆಗೆ ಪೂರಕವಾಗಿದೆ" ಎಂದರು.

ಡ್ರೈವಿಂಗ್ ಸ್ಕೂಲ್ ನಲ್ಲಿ ತರಬೇತಿ ಪಡೆಯುತ್ತಿರುವ ಸುಮಾರು 400 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಎಲ್ಲಪ್ಪ ದೊಡ್ಡಮನಿ ಸ್ವಾಗತಿಸಿದರು. ವೀಣಾ ವಿಜಾಪುರ ಹಾಗೂ ಶ್ರೀಶೈಲ್ ಟಕ್ಕಣ್ಣವರ ನಿರೂಪಿಸಿದರು.

## ಸಚಿವ ಸತೀಶ್ ಜಾರಕಿಹೊಳಿಗೆ ಆರತಿ ಬೆಳಗಿ, ಸಿಹಿ ತಿನಿಸಿದ ಪತ್ನಿ ಶಕುಂತಲಾ, ಮಗಳು ಪ್ರಿಯಂಕಾ



ಗೋಕಾಕ: ಕಾಂಗ್ರೆಸ್ ನೂತನ ಸರ್ಕಾರದ ಸಂಪುಟ ದರ್ಜೆಯ ಸಚಿವರಾಗಿ ಪ್ರಪ್ರಥಮ ಬಾರಿಗೆ ನಗರದ ಹಿಲ್ ಗಾರ್ಡನ್‌ನಲ್ಲಿರುವ ಸ್ವಗ್ರಹಕ್ಕೆ ಆಗಮಿಸಿದ ಹಿನ್ನೆಲೆಯಲ್ಲಿ ಸಚಿವ ಸತೀಶ್ ಜಾರಕಿಹೊಳಿ ಅವ–ರಿಗೆ ಧರ್ಮ ಪತ್ನಿ ಶಕುಂತಲಾ ಹಾಗೂ ಮಗಳು ಪ್ರಿಯಂಕಾ ಆರತಿ ಬೆಳಗಿ, ಸಿಹಿ ತಿನಿಸಿ ಸಂಭ್ರಮ ಪಟ್ಟರು.

ಪಟಾಕಿ ಸಿಡಿಸಿ ಸಂಭ್ರಮಿಸಿದ ಅಭಿಮಾನಿಗಳು: ನಗರದ ಬಸವೇಶ್ವರ ಪ್ರತಿಮೆಗೆ ಹೂ ಮಾಲೆ ಅರ್ಪಿಸುವ ಸಮಯದಲ್ಲಿ ಅವರ ಅಪಾರ ಅಭಿಮಾನಿಗಳು ಪಟಾಕಿ ಸಿಡಿಸಿ ಜಯಘೋಷ ಹಾಕುವುದರ ಮೂಲಕ ಸಂಭ್ರಮಿಸಿದರು.

ಜಿಲ್ಲೆಯ ನಾನಾ ಕಡೆಗಳಿಂದ ಕಾಂಗ್ರೆಸ್ ಪಕ್ಷ ದ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಸಾವಿರಾರು ಸಂಖ್ಯೆಯಲ್ಲಿ ಆಗಮಿಸಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಹೂ ಮಾಲೆಗಳನ್ನು ಸಮರ್ಪಿಸಿ ಶುಭ ಕೋರಿದರು

ಈ ಸಂದರ್ಭದಲ್ಲಿ ಯುವ ನಾಯಕ ರಾಹುಲ್ ಜಾರಕಿಹೊಳಿ, ಕಾಂಗ್ರೆಸ್ ಮುಖಂಡರಾದ ವಿವೇಕ್ ಜತ್ತಿ ಅನೇಕ ಮುಖಂಡರು ಇದ್ದರು.

## ಶಾರ್ಟ್ ಸರ್ಕ್ಯೂಟ್‌ನಿಂದ ಹೊತ್ತಿ ಉರಿದ ಗ್ರಾಪಂ



ತುಮಕೂರು: ವಿದ್ಯುತ್ ಪ್ರಸರಣದಲ್ಲಿ ಏರುಪೇರಿನಿಂದ ಶಾರ್ಟ್ ಸರ್ಕ್ಯೂಟ್ ಉಂಟಾಗಿ ಗ್ರಾಮ ಪಂಚಾಯಿತಿ ಕಚೇ–ರಿಯ ಕಂಪ್ಯೂಟರ್ ಸೇರಿದಂತೆ ಕಡತಗಳಿಗೆ ಬೆಂಕಿ ತಗಲಿ ಸುಟ್ಟು ಭಸ್ಮವಾದ ಘಟನೆ ತುಮಕೂರಿನ ಪಾವಗಡ ತಾಲೂಕಿನ ಪೊನ್ನಸಂದ್ರ ಗ್ರಾಮ ಪಂಚಾಯಿತಿಯಲ್ಲಿ ಈ ಘಟನೆ ನಡೆದಿದೆ.

ವಿದ್ಯುತ್‌ನ ವೋಲ್ಟೇಜ್ ಹೆಚ್ಚಾದ ಹಿನ್ನೆಲೆಯಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡು ಪ್ರಮುಖ ಫೈಲ್‌ಗಳು ಸೇರಿದಂತೆ ಕಂಪ್ಯೂಟರ್‌ಗಳು ಸಹ ಬೆಂಕಿಯಲ್ಲಿ ಸುಟ್ಟು ಕರಕಲಾಗಿದೆ. ಘಟನೆ ನಡೆದ ಸಮಯದಲ್ಲಿ ಸ್ಥಳೀಯ ಗ್ರಾಮಸ್ಥರು ನೀರಿನಿಂದ ಬೆಂಕಿ–ಯನ್ನು ಆರಿಸಲು ಹರಸಾಹಸ ಪಟ್ಟರೂ ಸಾಧ್ಯವಾಗಲಿಲ್ಲ.

ಬಳಿಕ ಸ್ಥಳಕ್ಕೆ ಪಾವಗಡ ಅಗ್ನಿಶಾಮಕ ಠಾಣೆಯ ಸಿಬ್ಬಂದಿ ಭೇಟಿ ನೀಡಿ ಬೆಂಕಿ–ಯನ್ನು ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಮಕ್ಕಳನ್ನು ಉತ್ತಮ ಪ್ರಜೆಗಳನ್ನಾಗಿಸುವ ಜವಾಬ್ದಾರಿ ನಮ್ಮದ್ದು: ಟೋಪಿಚಾಂದ



ಮೂಡಲಗಿ : ಮಗುವಿನ ಕಲಿಕೆ ಫಲಪ್ರದವಾಗುವ ನಿಟ್ಟಿನಲ್ಲಿ ಶಿಕ್ಷಕ ಸಮೂಹ, ಮಾರ್ಗದರ್ಶಿ ಸಂಪನ್ಮೂಲ ವ್ಯಕ್ತಿಗಳ ಹಾಗೂ ಪಾಲಕರ ಕಾಳಜಿ ಅತ್ಯಾವಶ್ಯಕವಾಗಿದೆ. ಮಗು ಕೇಂದ್ರಿತ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಮಕ್ಕಳ ಭವಿಷ್ಯತ್ತಿನ ದೃಷ್ಟಿಯಲ್ಲಿ ಉತ್ತಮ ಪ್ರಜೆಗಳನ್ನಾಗಿಸುವ ಮಹತ್ತರ ಜವಾಬ್ದಾರಿ ನಮ್ಮೆಲ್ಲರದಾಗಿದೆ ಎಂದು ಸಮೂಹ ಸಂಪನ್ಮೂಲ ವ್ಯಕ್ತಿ ಆರೀಫ್‌ಹುಸೇನ ಟೋಪಿಚಾಂದ ಹೇಳಿದರು.

ಸೋಮವಾರ ಸಮೀಪದ ಸಂಗನಕೇರಿ ಗ್ರಾಮದ ಸರಕಾರಿ ಹಿರಿಯ ಉರ್ದು ಪ್ರಾಥ–ಮಿಕ ಶಾಲೆಯಲ್ಲಿ ಜರುಗಿದ ಮೂಡಲಗಿ ವಲಯದ ಉರ್ದು ಶಿಕ್ಷಕರ ಶೈಕ್ಷಣಿಕ ಮಾರ್ಗಸೂಚಿ ಕುರಿತು ವರ್ಷದ ಪ್ರಥಮ ಕಾರ್ಯಾಗಾರದಲ್ಲಿ ಭಾಗವಹಿಸಿ ಮಾತನಾಡಿದರು.

ಮಗು ಕೇಂದ್ರಿತ ಕಲಿಕೆಯಾದಾಗ ಮಾತ್ರ ಶಿಕ್ಷಣ ಕ್ಷೇತ್ರ ವಿವಿಧ ಆಯಾಮಗಳಲ್ಲಿ ಮಗುವಿನ ವಿಕಸನ ಸಾಧ್ಯವಾಗುವದು.

ಶಿಕ್ಷಣ ಇಲಾಖೆಯಿಂದ ದೊರೆಯುವ ವಿವಿಧ ಯೋಜನೆಗಳು, ಪ್ರೋತ್ಸಾಹಕಗಳು, ಸ್ಥಳೀಯ ಚುನಾಯಿತ ಪ್ರತಿನಿಧಿಗಳ, ಶಾಲಾ ಉಸ್ತುವಾರಿಗಳ, ಅಧಿಕಾರಿ ವರ್ಗದವರ ಸಹಕಾರದಿಂದ ಶೈಕ್ಷಣಿಕ ಪ್ರಗತಿಗೆ ಶ್ರಮಿಸಬೇಕು ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಡಿ.ಕೆ ಜಮಾದಾರ, ಎಸ್.ಎ ಮುಲ್ಲಾ, ಎ.ಜಿ ಮನಿಯಾರ,, ಎಮ್. ಕೆ ರೋಣ, ಎಮ್.ಎಮ್ ಬೋಜಗಾರ, ಎ.ಎಮ್ ಬಾಗವಾನ, ಎಸ್. ಬಾಗಸಿರಾಜ, ಪಿ.ಕೆ ಪಠಾಣ, ಎಮ್.ಎಸ್ ಶೇಖ ಹಾಗೂ ಶೈಕ್ಷಣಿಕ ವಲಯದ ಉರ್ದು ಶಿಕ್ಷಕ ಸಮೂಹದವರು ಹಾಜರಿದ್ದರು.

## ಬ್ರಾಹ್ಮಣರು ಹೋರಾಟ ಮನೋಭಾವನೆ ಬೆಳೆಸಿಕೊಳ್ಳಬೇಕು: ದೇಶಪಾಂಡೆ



ಮುಧೋಳ: ಭಾರತದಲ್ಲಿ ಬ್ರಾಹ್ಮಣ–ರು ಅನಾಥರಾಗುತ್ತಿದ್ದಾರೆ. ಅತಿ ಕಡಿಮೆ ಸಂಖ್ಯೆಯಲ್ಲಿರುವ ಬ್ರಾಹ್ಮಣ–ರಿಗೆ ಸರ್ಕಾರಗಳು ಕೂಡಾ ಕಡೆಗಣಿಸಿವೆ, ಬ್ರಾಹ್ಮಣರು ಹೋರಾಟದ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಕೆ.ಎಸ್.ದೇಶಪಾಂಡೆ ತಿಳಿಸಿದರು.

ಅವರು ಭಾನುವಾರ ಇಲ್ಲಿನ ರಾಘವೇಂದ್ರ ಸಭಾಭವನದಲ್ಲಿ ತಾಲ್ಲೂಕಾ ಬ್ರಾಹ್ಮಣ ಸಂಘದ ಆಶ್ರಯದಲ್ಲಿ ನಡೆದ ಪ್ರತಿಭಾ ಪುರಸ್ಕಾರ ಸಮಾರಂಭದ ಮುಖ್ಯಅತಿಥಿಗಳಾಗಿ ಭಾಗವಹಿಸಿ ಮಾತನಾಡುತ್ತಿದ್ದರು. ಬ್ರಾಹ್ಮಣ–ರಿಗೆ ಈಗಿರು ಪ್ರತಿಶತ ಹತ್ತರಷ್ಟು ಮೀಸಲಾತಿಯನ್ನು 2ಪ್ರತಿಶತಕ್ಕೆ ಇಳಿಸುತ್ತಿದ್ದು ಯಾವ ಬ್ರಾಹ್ಮಣ–ರೂ ಈ ಬಗ್ಗೆ ಹೋರಾಟ ಮಾಡದೇ ಇರುವದು ಶೋಚನೀಯ ಸಂಗತಿ, ಡಾ: ಬಾಬಾಸಾಹೇಬ ಅಂಬೇಡ್ಕರರು ಸಂವಿಧಾನದಲ್ಲಿ ಹೇಳಿದ್ದು ಯಾವದೇ ಸಮುದಾಯದ ಬಡವರಿಗೆ ಸೌಲಭ್ಯಗಳು ತಲುಪಬೇಕು ಎಂದು ಆದರೆ ಇಂದಿನ ರಾಜಕೀಯ ವ್ಯವಸ್ಥೆಯಲ್ಲಿ ಓಟಿಗಾಗಿ ಕೇವಲ ಕೆಲವೇ ಸಮುದಾಯಗಳಿಗೆ ಸೌಲಭ್ಯಗಳನ್ನು ಮುಂದುವರೆಸುತ್ತಾ ಹೊರಟಿರುವದು ವಿಷಾದನೀಯವೆಂದು ಖೇದವ್ಯಕ್ತಪಡಿಸಿದರು. ಬ್ರಾಹ್ಮಣ–ರಿಗೆ ಬುದ್ಧಿಶಕ್ತಿಯ ಬಲವಿದೆ ಎಂದು ಇಷ್ಟು ದಿನ ಬದುಕಿದ್ದಾರೆ ಇಲ್ಲವಾದರೆ ಭೂ ಸುದಾರಣೆ ಹೆಸರಿನಲ್ಲಿ ಕಾಯ್ದೆಮಾಡಿದಾಗಲೇ ಬ್ರಾಹ್ಮಣರು ನಾಶವಾಗುತ್ತಿದ್ದರು ಎಂದರು.

ಸಾನಿಧ್ಯವಹಿಸಿದ್ದ ವೇಮೂ ಪಾಂಡುರಂಗಾಚಾರ್ಯ ಜೋಶಿ ಮಾತನಾಡಿ ಬ್ರಾಹ್ಮಣರಿಗೆ ಯಾವದೇ ಮೀಸಲಾತಿ ಕೊಟ್ಟಿಲ್ಲ, ನಮ್ಮ ಮಠಾಧೀಶರಾಗಲಿ ನಮ್ಮ ಮುಖಂಡರಾಗಲಿ ಎಂದು ಸರಕಾರದ ಮುಂದೆ ಮೀಸಲಾತಿಗಾಗಿ ಕೈಚಾಚುವ ಕೆಲಸವನ್ನು ಮಾಡಿಲ್ಲ, ಸಚಿವಗಿ–ರಿಗಾಗಿ ಲಾಬಿ ಮಾಡುವದಾಗಲಿ, ಸವಲತ್ತುಗಳಿಗಾಗಿ ವಿಧಾನಸೌಧಕ್ಕೆ, ಪಾರ್ಲಿಮೆಂಟಿಗೆ ಅಲೆಯುವ ಕೆಲಸ ಮಾಡಿಲ್ಲ ಆದರೆ ನಮಗೆ ಭಗವಂತ ಕರುಣಿಸಿದ ಪ್ರಾಮಾಣಿಕತೆ, ಬುದ್ಧಿಶಕ್ತಿ ಎಂಬ ಮೀಸಲಾತಿ ಇದೆ, ಯಾವ ಸರಕಾರದ ಹಂಗು ನಮಗೆ ಬೇಡ ಎಂದು ಆಕ್ರೋಶ ವ್ಯಕ್ತಪಡಿಸಿದರು. ವೇಮೂ ವಿಠ್ಠಲ ಭಡಜಿ ಕವಠೇಕರ, ಪಂಡೀತ ರಾಘವಾಚಾರ್ಯ ಮಿಟ್ಟಿ ಸಾನಿಧ್ಯವಹಿಸಿ ಮಾತನಾಡಿದರು.

ಪಂಡಿತ ರುಷಿಕೇಷಾಚಾರ್ಯ ಜೋಶಿ, ಸಮಾಜದ ಮುಖಂಡ ಸೋನಪ್ಪಿ ಕುಲಕರ್ಣಿ, ಪ್ರಮೋದಬಾಜಿ, ರಾಜೇಂದ್ರ ಬಬಲಾದಿ ವೇದಿಕೆ ಮೇಲೆ ಉಪಸ್ಥಿತರಿದ್ದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಾಘವೇಂದ್ರ ಕುಲಕರ್ಣಿ ಮಾತನಾಡಿ ತಾಲ್ಲೂಕಿನ ಎಲ್ಲ ಬ್ರಾಹ್ಮಣ ಸಮಾಜದವರು ತಮ್ಮ ಕುಟುಂಬದವರೆಲ್ಲರ ಹೆಸರು ಹಾಗೂ ಉದ್ಯೋಗದ ವಿವರಗಳನ್ನು ತಾಲ್ಲೂಕು ಬ್ರಾಹಂಣ ಸಂಘದಮುಖಂಡರ ಬಳಿ ಕೊಡಬೇಕು, ತಾಲ್ಲುಕಿನ ಎಲ್ಲ ಬ್ರಾಹ್ಮಣ–ರ ಮಾಹಿತಿ ಪುಸ್ತಕ ಮಾಡುವ ನಿಮಿತ್ತ ಮಾಹಿತಿ ಸಂಗ್ರಹಿಸಲಾಗುತ್ತಿದ್ದು ತಕ್ಷಣ ಎಲ್ಲರು ಮಾಹಿತಿ ಒದಗಿಸಬೇಕು, ಮತ್ತು ಈ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಇನ್ನು ಮುಂದೆ ಪ್ರತಿ ವರ್ಷ ನಡೆಯಲಿದೆ ಎಂದರು.

ರಾಜು ಜೋಶಿ ಪ್ರಾಸ್ತಾವಿಕ ಮಾತನಾಡಿದರು, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಉತ್ತಮ ಸಾಧನೆ ಮಾಡಿದ25 ಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಹಾಗೂ ಮೆಡಿಕಲ್ ನಲ್ಲಿ ಎರಡು ಗೋಲ್ಡಮೆಡಲ್ ಪಡೆದ ಅಖಿಲ್ ದೇಶಪಾಂಡೆ ಯವರಿಗೂ ಸನ್ಮಾನಿಸಿ ಗೌರವಿಸಲಾಯಿತು.

ದಿವ್ಯಾ ದೇಸಾಯಿ ಹಾಗೂ ಅನುಷಾ ಮನಗೂಳಿ ಭಕ್ತಿಗೀತೆ ಹೇಳಿದರು, ಸಂತೋಷ ದೇಶಪಾಂಡೆ ಸ್ವಾಗತಿಸಿದರು, ಸುನಿತಾ ದೇಶಪಾಂಡೆ ನಿರೂಪಿಸಿದರು, ಆನಂದ ಕುಲಕರ್ಣಿ ವಂದಿಸಿದರು.

## ಅಂಬರೀಶ್ ಜನ್ಮದಿನಕ್ಕೆ ಸುಮಲತಾ ಭಾವುಕ ಪೋಸ್ಟ್



ಬೆಂಗಳೂರು: ಸೋಮವಾರ (ಮೇ 29) ನಟ, ದಿವಂಗತ ಅಂಬರೀಶ್ ಅವರ ಜನ್ಮದಿನ ಹಿನ್ನೆಲೆ ಹಲವು ಗಣ್ಯರು ಶುಭಾಶಯ ಕೋ–ರಿದ್ದಾರೆ.

ಈ ನಡುವೆ ಮಂಡ್ಯ ಸಂಸದೆ ಸುಮಲತಾ ಪತಿ ಅಂಬರೀಶ್ ಸಾಮಾಜಿಕ ಜಾಲತಾಣಗಳಲ್ಲಿ ಹಳೆಯ ಫೋಟೊಗಳನ್ನು ಪ್ರಕಟಿಸಿ ಭಾವುಕ ಪೋಸ್ಟ್ ಒಂದನ್ನು ಹಂಚಿಕೊಂಡಿದ್ದಾರೆ.

"ನಿಮ್ಮ ಬಾಲ್ಯದ ದಿನಗಳನ್ನು ಆಗಾಗ್ಗೆ ಹೇಳುತ್ತಿದ್ದಿರಿ. ಬಾಲ್ಯದ ಆ ತುಂಟತನ ಅದು ನಿಮ್ಮಲ್ಲಿ ಕೊನೆವರೆಗೂ ಇತ್ತು. ಹಾಗಾಗಿ ನಿಮ್ಮ ಹುಟ್ಟು ಹಬ್ಬ ಅದೊಂದು ಸಡಗರವಾಗಿರುತ್ತಿತ್ತು. ಅದು ನಮಗಷ್ಟೇ ಅಲ್ಲ, ಅಭಿಮಾನಿಗಳ ಪಾಲಿಗೆ ನಿಜವಾದ ಹಬ್ಬ ಭೌತಿಕವಾಗಿ ನಮ್ಮೊಂದಿಗೆ ನೀವು ಇದ್ದಿದ್ದರೆ, ಇಂದು 71ನೇ ವರ್ಷದ ಹುಟ್ಟು ಹಬ್ಬವನ್ನೂ ಅಭಿಮಾನಿಗಳ ಜೊತೆಯಾಗಿ ಮತ್ತಷ್ಟು ಅದ್ದೂರಿಯಾಗಿ ಆಚರಿಸುತ್ತಿದ್ದೆವು.

ಮನೆ ಮುಂದೆ ಜನಸಾಗರ, ನಿಮ್ಮ ಆರ್ಭಟ, ಹಾಸ್ಯ ಪ್ರಜ್ಞೆಯ ಮಾತು, ರಾತ್ರಿ ಇಡೀ ಕಾಯುತ್ತಾ ನಿಂತಿದ್ದ ಅಭಿಮಾನಿಗಳ ಘೋಷಣೆ ಇನ್ನೂ ಹಾಗೆಯೇ ಇದೆ. ಇವತ್ತೂ ಕೂಡ ಅವೆಲ್ಲವೂ ನಿಮಗೆ ಶುಭಾಶಯ ಹೇಳುತ್ತಿವೆ. ಸ್ವೀಕರಿಸಿ. ಹ್ಯಾಪಿ ಬರ್ತಡೇ ಮೈ ಅಂಬಿ. ಜತೆಗಿರದ ಜೀವ ಎಂದೆಂದಿಗೂ ಜೀವಂತ" ಎಂದು ಸುಮಲತಾ ಬರೆದುಕೊಂಡಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089